₹ 4 ಪುಟ: 4 ಸಂಪುಟ: 4 ಸಂಚಿಕೆ 60 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 Issue: 60 Wednesday, 19, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ಜನಸಾಗರೋಪಾದಿಯ ಅದ್ಧೂರಿ ಮೆರವಣಿಗೆಯಲ್ಲಿ ತೆರಳಿ ನಾಮಪತ್ರ ಸಲ್ಲಿಸಿದ ಲಕ್ಷ್ಮೀ ಹೆಬ್ಬಾಳಕರ್: ಸತೀಶ್ ಜಾರಕಿಹೊಳಿ ಸಾಥ್




ಬೆಳಗಾವಿ: ಸಿಪಿಎಡ್ ಮೈದಾನದಿಂದ ಚನ್ನಮ್ಮ ವೃತ್ತದವರೆಗೆ ಎಲ್ಲಿ ನೋಡಿದರಲ್ಲಿ ಜನವೋ ಜನ. ರಾರಾಜಿಸಿದ ಕಾಂಗ್ರೆಸ್ ಭಾವುಟ. ಸಾಗರೋಪಾದಿಯಲ್ಲಿ ಸೇರಿದ್ದ ಜನರೊಂದಿಗೆ ಅದ್ಧೂರಿ ಮೆರವಣಿಗೆಯಲ್ಲಿ ತೆರಳಿ ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಶಾಸಕಿ ಲಕ್ಷ್ಮೀ ಹೆಬ್ಬಾಳಕರ ಇಂದು ನಾಮಪತ್ರ ಸಲ್ಲಿಸಿದರು.

ಹಿಂಡಲಗಾ ಗಣಪತಿ ಮಂದಿರದಲ್ಲಿ ಪೂಜೆ ಸಲ್ಲಿಸಿದ ನಂತರ ಅಲ್ಲಿಂದಲೇ ಮೆರವಣಿಗೆ ಆರಂಭವಾಯಿತು. ಸಿಪಿಎಡ್ ಮೈದಾನಕ್ಕೆ ಆಗಮಿಸುತ್ತಿದ್ದಂತೆ ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಬೆಂಬಲಿಗರು ಸೇರಿಕೊಂಡರು. ಅಲ್ಲಿಂದ ಅಪಾರ ಸಂಖ್ಯೆಯ ಬೆಂಬಲಿಗರು, ಕಾಂಗ್ರೆಸ್ ಕಾರ್ಯಕರ್ತರ 'ನ್ನೊಳಗೊಂಡು ಮೆರವಣಿಗೆ ನಡೆಸಲಾಯಿತು.

ಅಲಂಕೃತ ತೆರೆದ ವಾಹನದಲ್ಲಿ ಲಕ್ಷ್ಮೀ ಹೆಬ್ಬಾಳಕರ ಹಾಗೂ ಇತರ ಗಣ್ಯರು ಇದ್ದರು. ಅಭಿಮಾನಿಗಳು, ಬೆಂಬಲಿಗರು, ಪಕ್ಷದ ಕಾರ್ಯಕರ್ತರು ಶಾಸಕಿ ಲಕ್ಷ್ಮೀ ಹೆಬ್ಬಾಳಕರ ಅವರಿಗೆ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ಜಯಕಾರ ಮೊಳಗಿದರು. ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಅವರ ಸಾಧನೆಯನ್ನು ಪ್ರಚುರಪಡಿಸುವ ಹಾಡುಗಳು ಮೊಳಗಿದವು. ಮೆರವಣಿಗೆಯುದ್ದಕ್ಕೂ ಕಾಂಗ್ರೆಸ್ ಪಕ್ಷದ ಹಾಗೂ ಲಕ್ಷ್ಮೀ ಹೆಬ್ಬಾಳಕರ ಅವರ ಭಾವಚಿತ್ರವಿರುವ ಫೋಟೊಗಳು ರಾರಾಜಿಸಿದವು. ಢೋಲು, ವಾದ್ಯಗಳ ಮೂಲಕ ಮೆರವಣಿಗೆಗೆ ಮೆರುಗು ತಂದರು.

ಮೆರವಣಿಗೆ ಚನ್ನಮ್ಮ ವೃತ್ತದ ಬಳಿ ಬರುತ್ತಿದ್ದಂತೆ, 40 ಸಾವಿರಕ್ಕೂ ಅಧಿಕ ಸಂಖ್ಯೆಯಲ್ಲಿ ಸೇರಿದ್ದ ಬೆಂಬಲಿಗರನ್ನು ಉದ್ದೇಶಿಸಿ ಮಾತನಾಡಿದ ಲಕ್ಷ್ಮೀ ಹೆಬ್ಬಾಳಕರ, "ಪ್ರತಿಪಕ್ಷದ ಶಾಸಕಿಯಾದರೂ ಅಲ್ಪಾವಧಿಯಲ್ಲೇಅಪಾರ ಅನುದಾನ ತಂದು ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿ ಮಾಡಿ ತೋರಿಸಿದ್ದೇನೆ. ಕೊರೋನಾ, ಪ್ರವಾಹಗಳಿಂದಾಗಿ ಒಂದಿಷ್ಟು ಸಮಯ ನಷ್ಟವಾದರೂ ಸಿಕ್ಕಿದ ಸಮಯಾವಕಾಶವನ್ನು ಸದುಪಯೋಗ ಪಡಿಸಿಕೊಂಡು ಹಗಲು- ರಾತ್ರಿ ಕೆಲಸ ಮಾಡಿ ಕೊಟ್ಟ ವಚನವನ್ನು ಪೂರೈಸಿದ್ದೇನೆ. ಎಲ್ಲ ಜಾತಿ, ಧರ್ಮದ ಜನರಿಗೂ ಮಂದಿರ, ಸಮುದಾಯಭವನಗಳನ್ನು ನಿರ್ಮಿಸಿಕೊಟ್ಟಿದ್ದೇನೆ.

ರಾಜಹಂಸಗಡದಲ್ಲಿ ಭವ್ಯ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿ ಸ್ಥಾಪಿಸಿದ್ದೇನೆ. ಜನ ಕಷ್ಟಗಳಿಗೆ ಸ್ಪಂದಿಸುವ ಪ್ರಾಮಾಣಿಕ ಪ್ರಯತ್ನ ಮಾಡಿದ್ದೇನೆ. ಬರುವ ಮೇ 10ರಂದು ನಡೆಯುವ ಚುನಾವಣೆಯಲ್ಲಿ ಎಲ್ಲರೂ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸಿ ನಿಮ್ಮ ಮನೆಮಗಳ ಕೊರಳಿಗೆ ವಿಜಯದ ಮಾಲೆ ಹಾಕಬೇಕು," ಎಂದು ಕನ್ನಡ ಹಾಗೂ ಮರಾಠಿ ಭಾಷೆಯಲ್ಲಿ ನಿವೇದನೆ ಮಾಡಿದರು.

ಇದಕ್ಕೂ ಮುನ್ನ ಲಕ್ಷ್ಮೀ ಹೆಬ್ಬಾಳಕರ್ ಅವರ ತಾಯಿ ಗಿರಿಜಾ ಬಸವರಾಜ ಹಟ್ಟಿಹೊಳಿ ಹಾಗೂ ಸಹೋದರಿ ಸೇರಿ, ಸಂಸ್ಕೃತಿ, ಸಂಪ್ರದಾಯದಂತೆ ಗೋಮಾತೆಗೆ ವಿಶೇಷ ಪೂಜೆ ಸಲ್ಲಿಸಿ, ಪ್ರಾರ್ಥಿಸಿದರು.

ಅಲ್ಲಿಂದ ಸುಳೇಬಾವಿಗೆ ತೆರಳಿದ ಲಕ್ಷ್ಮೀ ಹೆಬ್ಬಾಳಕರ ಈ ಭಾಗದ ಜಾಗೃತ ಶಕ್ತಿ ಶ್ರೀ ಮಹಾಲಕ್ಷ್ಮೀ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ಲಕ್ಷ್ಮೀ ಹೆಬ್ಬಾಳಕರ ಅವರ ಸಹೋದರ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಪುತ್ರ, ಯುವ ಕಾಂಗ್ರೆಸ್ ಮುಖಂಡ ಮೃಣಾಲ್ ಹೆಬ್ಬಾಳಕರ ಸೇರಿದಂತೆ ಕುಟುಂಬದ ಸದಸ್ಯರು, ಹಿತೈಷಿಗಳು ಹಾಗೂ ಅಭಿಮಾನಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

ನಂತರ ಹಿಂಡಲಗಾದ ಶ್ರೀ ಮಹಾಗಣಪತಿ ದೇಗುಲಕ್ಕೆ ಭೇಟಿ ನೀಡಿ ಅಲ್ಲಿಯೂ ವಿಶೇಷ ಪೂಜೆ ನೆರವೇರಿಸಿ ಕ್ಷೇತ್ರ, ಕ್ಷೇತ್ರದ ಜನತೆಯ ಸರ್ವಾಂಗೀಣ ಅಭ್ಯುದಯಕ್ಕಾಗಿ ಪ್ರಾರ್ಥಿಸಿದರು. ನಂತರ ಅಲ್ಲಿಂದಲೇ ಸಹಸ್ರ ಸಹಸ್ರ ಸಂಖ್ಯೆ ಬೆಂಬಲಿಗರೊಂದಿಗೆ ಮೆರವಣಿಗೆ ಆರಂಭವಾಯಿತು.

ಅಲ್ಲಿಂದ ಚುನಾವಣಾಧಿಕಾರಿ ಕಚೇರಿಗೆ ಮೆರವಣಿಗೆಯಲ್ಲೇ ತೆರಳಿದ ಲಕ್ಷ್ಮೀ ಹೆಬ್ಬಾಳಕರ, ಚುನಾವಣಾಧಿಕಾರಿಗೆ ಎರಡು ಸೆಟ್ ಗಳಲ್ಲಿ ನಾಮಪತ್ರ ಸಲ್ಲಿಸಿದರು. ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ, ವಿಧಾನ ಹಿರೇಬಾಗೇವಾಡಿಯ ಅಶ್ರಫ್ ಪೀರ್ ದರ್ಗಾ ಅಜ್ಜನವರು, ಯುವರಾಜ ಕದಂ, ಸಿ.ಸಿ.ಪಾಟೀಲ, ಡಿಕೋಳ್ಕರ್, ಶಂಕರಗೌಡ ಪಾಟೀಲ, ಬಸವರಾಜ ಮ್ಯಾಗೋಟಿ, ಸುರೇಶ ಇಟಗಿ, ಅಡಿವೇಶ ಇಟಗಿ, ಮಹಾಂತೇಶ ಮತ್ತಿಕೊಪ್ಪ, ಬಾಗಣ್ಣ ನರೋಟಿ, ಸಿದ್ದಪ್ಪ ಕಾಂಬಳೆ, ಮನೋಹರ ಬಾಂಡಗಿ, ಸುರೇಶ ಗೋವಣ್ಣವರ್, ಜಯರಾಂ ಪಾಟೀಲ, ಅರವಿಂದ ಪಾಟೀಲ, ಗಂಗಣ್ಣ ಕಲ್ಲೂರ, ಅಶೋಕ ತೋರ್ಲಿ, ಅಷ್ಪಾಕ ತಹಸಿಲ್ದಾರ, ಅಪ್ಪಾ ಬಾಗವಾನ, ಬಸವಂತ ಮಾಯಿಕ, ಮಹೇಶ ಸುಗನೆನ್ನವರ್, ಮಹಾವೀರ ಪಾಟೀಲ, ಬಸವರಾ ತಳವಾರ ಸೇರಿದಂತೆ ಹಲವಾರು ಗಣ್ಯರು ಇದ್ದರು.

## 7 ಕೋಟಿ ರೂ. ಪತ್ತೆ: ಐಎಎಸ್ ಅಧಿಕಾರಿ ಸ್ಥಳಕ್ಕೆ ಬಂದ ನಂತರ ಹಣ ಮಾಯ



ಬೆಂಗಳೂರು: ಚುನಾವಣೆ ನೀತಿ ಸಂಹಿತೆ ಹಿನ್ನೆಲೆ ರಾಜ್ಯಾದ್ಯಂತ ಚುನಾವಣಾಧಿಕಾರಿಗಳು ಮತ್ತು ಪೊಲೀಸರು ರಾಜಕೀಯ ಚಟುವಟಿಕೆ ಹಾಗೂ ವಾಹನಗಳ ಮೇಲೆ ಹದ್ದಿನ ಕಣ್ಣಿಟ್ಟಿದ್ದಾರೆ. ನಿನ್ನೆ ತಡರಾತ್ರಿ ಬೆಂಗಳೂರಿನಲ್ಲಿ 7 ಕೋಟಿ ಪತ್ತೆಯಾಗಿದೆ.

ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲಿ ತಡರಾತ್ರಿ 7 ಕೋಟಿ ಹಣ ಪತ್ತೆಯಾಗಿದೆ. ಹಣ ಸಿಕ್ಕ ಕೆಲವೇ ಕ್ಷಣದಲ್ಲಿ ಓರ್ವ ಐಎಎಸ್ ಅಧಿಕಾರಿ ಸ್ಥಳಕ್ಕೆ ಬಂದಿದ್ದಾರೆ.

ನಂತರ 7 ಕೋಟಿ ಹಣ ಏನಾಯಿತು ಎಂದು ಯಾರಿಗೂ ಗೊತ್ತಿಲ್ಲ. ಸ್ಥಳೀಯ ಪೊಲೀಸರಿಗೂ 7 ಕೋಟಿ ಹಣದ ಬಗ್ಗೆ ಗೊತ್ತಿಲ್ಲವಂತೆ. ಸದ್ಯ ಈ ಬಗ್ಗೆ ಮಾಹಿತಿ ತಿಳಿದ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಅಖಾಡಕ್ಕೆ ಇಳಿದಿದ್ದು, ಹಣದ ಬಗ್ಗೆ ತನಿಖೆ ಆರಂಭಿಸಿದೆ.

## ಮಂಡ್ಯದಿಂದ ನಾನು ಸ್ಪರ್ಧೆ ಮಾಡಲ್ಲ: ಹೆಚ್.ಡಿ. ಕುಮಾರಸ್ವಾಮಿ




ಬೆಂಗಳೂರು: ಮಂಡ್ಯದಿಂದ ನಾನು ಸ್ಪರ್ಧೆ ಮಾಡಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದರು.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚನ್ನಪಟ್ಟಣ ಬಿಟ್ಟು ಬೇರೆಲ್ಲೂ ನಾನು ಸ್ಪರ್ಧೆ ಮಾಡಲ್ಲ. ಮಂಡ್ಯದಲ್ಲಿ ಈಗಾಗಲೇ ಪ್ರಬಲ ಅಭ್ಯರ್ಥಿಗಳು ಇದ್ದಾರೆ. ಈ ಹಿನ್ನೆಲೆಯಲ್ಲಿ ಮಂಡ್ಯದಿಂದ ನಾನು ಸ್ಪರ್ಧಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಕಾರ್ಯಕರ್ತರ ಒತ್ತಡ ಇರುವುದು ನಿಜ. ಆದರೆ ಮಂಡ್ಯದಿಂದ ನಾನು ಸ್ಪರ್ಧೆ ಮಾಡುವುದಕ್ಕೆ ಆಗಲ್ಲ. ನಾನು ಚನ್ನಪಟ್ಟಣದಿಂದ ಮಾತ್ರ ಸ್ಪರ್ಧೆ ಮಾಡುತ್ತಿದ್ದೇನೆ. ಚನ್ನಪಟ್ಟಣ ಬಿಟ್ಟು ಬೇರೆಲ್ಲೂ ನಾನು ಹೋಗಲ್ಲ. ಮಂಡ್ಯದಲ್ಲಿ ಅಭ್ಯರ್ಥಿಗಳು ಇದ್ದಾರೆ. ಈ ಬಗ್ಗೆ ಕೂತು ತೀರ್ಮಾನ ಮಾಡುತ್ತೇವೆ. ನಾಳೆ ಮೂರನೇ ಪಟ್ಟಿ ಬಿಡುಗಡೆ ಆಗಲಿದೆ ಎಂದು ಹೇಳಿದರು.

ಸಿವಿ.ಚಂದ್ರಶೇಖರ್ ಜೆಡಿಎಸ್ಗೆ ಸೇರ್ಪಡೆ ವಿಚಾರವಾಗಿ ಮಾತನಾಡಿ, ಕೊಪ್ಪಳ ವಿಧಾನಸಭಾ ಕ್ಷೇತ್ರದಲ್ಲಿ ಚಂದ್ರಶೇಖರ್ ಅವರು ಹಲವಾರು ವರ್ಷಗಳಿಂದ ಬಿಜೆಪಿಯಲ್ಲಿ ಸಂಘಟನೆ ಮಾಡಿದ್ದಾರೆ. ಎರಡ್ಮೂರು ಬಾರಿ ಅವರಿಗೆ ಟಿಕೆಟ್ ಮಿಸ್ ಆಗಿದೆ. ಭೂಮರೆಡ್ಡಿ ಅವರೂ ಕೂಡ ಅಲ್ಲಿ ಬಿಜೆಪಿಗೆ ಕೆಲಸ ಮಾಡಿದ್ದವರು. 2013ರಿಂದ ಭೂಮರೆಡ್ಡಿ ಅವರಿಗೂ ನನಗೂ ಸಂಪರ್ಕ ಇದೆ. ಚಂದ್ರಶೇಖರ್ ಅವರಿಗೆ ಹಲವಾರು ಬಾರಿ ಹೇಳಿದ್ದೆ. ಅಲ್ಲಿ ನಿಮಗೆ ಭವಿಷ್ಯ ಇಲ್ಲ ತೀರ್ಮಾನ ಮಾಡಿ ಅಂದಿದ್ದೆ. ಅಲ್ಲಿ ಈ ಬಾರಿಯೂ ಟಿಕೆಟ್ ಮಿಸ್ ಆಗಿದೆ. ಇದರಿಂದ ಮನನೊಂದು ಜೆಡಿಎಸ್ ಸೇರ್ಪಡೆಯಾಗಿದ್ದಾರೆ. ಕೊಪ್ಪಳದಿಂದ ನಮ್ಮ ಪಕ್ಷದಿಂದ ಸಿವಿ. ಚಂದ್ರಶೇಖರ್ ಸ್ಪರ್ಧೆ ಮಾಡ್ತಾರೆ ಎಂದು ಸ್ಪಷ್ಟಪಡಿಸಿದರು.

## ಬಿಜೆಪಿಯ ಹಲವು ನಾಯಕರು ಕಾಂಗ್ರೆಸ್ ಸೇರಲಿದ್ದಾರೆ: ರಾಮಲಿಂಗಾರೆಡ್ಡಿ

ಚಿಕ್ಕಬಳ್ಳಾಪುರ: ಬಿಜೆಪಿಯಲ್ಲಿ ಗುಂಪುಗಾರಿಕೆ ಹೆಚ್ಚಾಗಿದೆ, ಆ ಪಕ್ಷದಲ್ಲಿ ಶಿಸ್ತು ಇಲ್ಲ. ಬಿಜೆಪಿಯ ಇನ್ನೂ ಹಲವು ನಾಯಕರು ಕಾಂಗ್ರೆಸ್ ಸೇರಲಿದ್ದಾರೆ ಎನ್ನುವ ಮೂಲಕ ಕೆಪಿಸಿಸಿ ಕಾರ್ಯಾಧ್ಯಕ್ಷ ರಾಮಲಿಂಗಾರೆಡ್ಡಿ ಅವರು ಹೊಸ ಬಾಂಬ್ ಸಿಡಿಸಿದ್ದಾರೆ.

ಚಿಕ್ಕಬಳ್ಳಾಪುರದಲ್ಲಿ ಮಾತನಾಡಿದ ಅವರು, ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಗೆ ಭವಿಷ್ಯವಿಲ್ಲ ಎಂದಿದ್ದಾರೆ. ಈ ಚುನಾವಣೆಯಲ್ಲಿ ಬಿಜೆಪಿಗೆ 50-60 ಸ್ಥಾನ ಬಂದರೆ ಹೆಚ್ಚು. ವಿವಿಧ ಪಕ್ಷಗಳ ಮುಖಂಡರುಗಳನ್ನು ಯಡಿಯೂರಪ್ಪ ಬಿಜೆಪಿಗೆ ಕರೆ ತಂದಿದ್ರು. ಆದ್ರೆ ಬಿಜೆಪಿಯ ಇನ್ನೂ ಹಲವು ನಾಯಕರು ಕಾಂಗ್ರೆಸ್ ಸೇರಲಿದ್ದಾರೆ. ಬಿಜೆಪಿಗೆ ಭವಿಷ್ಯವಿಲ್ಲ ಅಂತಾ ನಾಯಕರಿಗೆ ಮನವರಿಕೆಯಾಗಿದೆ. ಈ ಬಾರಿ ಚುನಾವಣೆಯಲ್ಲಿ ಕಾಂಗ್ರೆಸ್ಗೆ ಸ್ಪಷ್ಟ ಬಹುಮತ ಬರುತ್ತದೆ.



ಕಾಂಗ್ರೆಸ್ 120ಕ್ಕೂ ಹೆಚ್ಚು ಸ್ಥಾನ ಗೆಲ್ಲಲಿದೆ. ಬಿಜೆಪಿ ಕಚ್ಚಾಟದಿಂದ ಕಾಂಗ್ರೆಸ್ಗೆ 150 ಸ್ಥಾನ ಬಂದ್ರೂ ಆಶ್ಚರ್ಯವಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಇನ್ನು ಇದೇ ವೇಳೆ ರಾಮಲಿಂಗಾರೆಡ್ಡಿ, ತಮಗೆ ಸಿಎಂ ಆಗುವ ಆಸೆ ಇರುವುದನ್ನು ವ್ಯಕ್ತಪಡಿಸಿದ್ದಾರೆ. ಕಾಂಗ್ರೆಸ್ನಲ್ಲಿ ನಾನು ಸೀನಿಯರ್. ನಾನು ಮುಖ್ಯಮಂತ್ರಿ ಹುದ್ದೆಗೆ ಅರ್ಹನಾಗಿದ್ದೇನೆ. ಆದ್ರೆ ಸ್ಪರ್ಧೆಯಲ್ಲಿ ಇಲ್ಲ. ಸಿಎಂ ಆಸೆ ಇಟ್ಟುಕೊಂಡಿರುವವರು ಆಗಲಿ. ನಮಗೆ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಬೇಕು ಅಷ್ಟೆ ಎಂದು ತಿಳಿಸಿದರು.

## ನನಗೆ ಟಿಕೆಟ್ ತಪ್ಪಲು ಮೂಲ ಕಾರಣ ಬಿ.ಎಲ್. ಸಂತೋಷ್ : ಶೆಟ್ಟರ್ ಬಾಂಬ್



ಹುಬ್ಬಳ್ಳಿ: ನನಗೆ ಟಿಕೆಟ್ ತಪ್ಪಲು ಮೂಲ ಕಾರಣ ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್. ನನಗೆ ಈ ಬಾರಿ ವಿಧಾನಸಭಾ ಚುನಾವಣೆಗೆ ಸ್ಪರ್ಧಿಸಲು ಅವಕಾಶ ಸಿಗಲಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಆರೋಪ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನನ್ನ ಟಿಕೆಟ್ ಕೈತಪ್ಪಲು ಹಾಗೂ ನಾನು ಬಿಜೆಪಿಗೆ ರಾಜೀನಾಮೆ ನೀಡಲು ಸಂತೋಷ್ ಮುಖ್ಯ ಕಾರಣ ಎಂದು ಆರೋಪಿಸಿದ್ದಾರೆ.

ಬೆಳಗಾವಿ ಲೋಕಸಭಾ ಉಪಚುನಾವಣೆಯಲ್ಲಿ ಬಿಜೆಪಿ ಗೆಲ್ಲಲು ನಾನು ಕಾರಣ. ಮಂಗಲಾ ಅಂಗಡಿಯವರು ಗೆದ್ದಿದ್ದಾರೆ. ಅವರ ಗೆಲುವಿನಲ್ಲಿ ನನ್ನ ಪಾತ್ರ ಬಹಳ ಮುಖ್ಯ ಎಂದು ಜಗದೀಶ್ ಶೆಟ್ಟರ್ ಹೇಳಿದರು.

## ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಸವದಿ ನಾಮಪತ್ರ ಸಲ್ಲಿಕೆ



ಅಥಣಿ: ಕಾಂಗ್ರೆಸ್ ಅಭ್ಯರ್ಥಿಯಾಗಿ ಲಕ್ಷ್ಮಣ ಸವದಿ ಅವರು ನಗರದ ಮಿನಿ ವಿಧಾನಸೌಧದಲ್ಲಿ ತಮ್ಮ ಉಮೇದುವಾರಿಕೆ ಸಲ್ಲಿಸಿದರು.

ಗಾಂಧಿ ಟೋಪಿ ಧರಿಸಿದ ಲಕ್ಷ್ಮಣ ಸವದಿ ಅವರು ಐದು ಜನರ ಜತೆ ಆಗಮಿಸಿ ಅಥಣಿ ತಹಶೀಲ್ದಾರ್ ಗೆ ನಾಮಪತ್ರ ಸಲ್ಲಿಸಿದರು. ಲಕ್ಷ್ಮಣ ಸವದಿ ಇಲ್ಲಿಯವರೆಗೆ 5 ಚುನಾವಣೆ ಎದುರಿಸಿದ್ದು, 6ನೇ ಚುನಾವಣೆಗೆ ಅದೃಷ್ಟ ಪರೀಕ್ಷೆಗೆ ಇಳಿದಿದ್ದಾರೆ. ಮೂರು ಚುನಾವಣೆಯಲ್ಲಿ ಜಯಗಳಿಸಿದ್ದಾರೆ.

ಬಿಜೆಪಿಯಲ್ಲಿ ಟಿಕೆಟ್ ಸಿಗದ ಹಿನ್ನೆಲೆಯಲ್ಲಿ ಲಕ್ಷ್ಮಣ ಸವದಿಯವರು ಪಕ್ಷ ತೊರೆದು ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ. ಬಿಜೆಪಿ ಪ್ರಾಥಮಿಕ ಸದಸ್ಯತ್ವ ಹಾಗೂ ವಿಧಾನ ಪರಿಷತ್ ಸದಸ್ಯ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಕಾಂಗ್ರೆಸ್ ಸೇರ್ಪಡೆಯಾದರು.

ಲಕ್ಷ್ಮಣ ಸವದಿಯಿಂದ ಶಿವಯೋಗಿಗಳ ದರ್ಶನ: ಇಂದು ಅಥಣಿ ಕ್ಷೇತ್ರದಿಂದ ಮಹೇಶ್ ಕುಮಟಳ್ಳಿ ವಿರುದ್ಧ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಸವದಿ ನಾಮಪತ್ರ ಸಲ್ಲಿಸಲ್ಲಿದ್ದಾರೆ. 11 ಗಂಟೆಗೆ ತಮ್ಮ ಅಭಿಮಾನಿಗಳು ಕಾರ್ಯಕರ್ತರ ಜೊತೆ ಬೃಹತ್ ಮೆರವಣಿಗೆ ಮೂಲಕ ತೆರಳಿ ಶಕ್ತಿ ಪ್ರದರ್ಶಿಸಿದರು.

ನಂತರ ಅಥಣಿ ತಹಶೀಲ್ದಾರ್ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಲಿದ್ದಾರೆ. ನಾಮಪತ್ರ ಸಲ್ಲಿಕೆಗೂ ಮುನ್ನ ಟೆಂಪಲ್ ರನ್ ಮಾಡಿರುವ ಸವದಿ, ಪಟ್ಟಣದ ಶಿವಯೋಗಿಗಳ ಮಠಕ್ಕೆ ಭೇಟಿ ನೀಡಿ ಶಿವಯೋಗಿಗಳ ದರ್ಶನ ಪಡೆದರು. ಅಲ್ಲದೆ, ಅಥಣಿಯ ವಿವಿಧ ದೇವಸ್ಥಾನಗಳಿಗೆ ಭೇಟಿ ನೀಡಿ ದೇವರ ಆಶೀರ್ವಾದ ಪಡೆದಿದ್ದಾರೆ.

ಈ ಸಂದರ್ಭದಲ್ಲಿ ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಕಾಂಗ್ರೆಸ್ ಮುಖಂಡರಾದ ಗಜಾನನ ಮಂಗಸೂಳಿ ಸೇರಿದಂತೆ ಇತರರು ಇದ್ದರು.

## ಬಿಜೆಪಿಯ ನಿಖಿಲ್ ಕತ್ತಿ, ಕಾಂಗ್ರೆಸ್‌ನ ಎಬಿಪಿ ನಾಮಪತ್ರ ಸಲ್ಲಿಕೆ



ಹುಕ್ಕೇರಿ : ಬರುವ ಮೇ 10 ರಂದು ನಡೆಯಲಿರುವ ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆಗೆ ಹುಕ್ಕೇರಿ ಮತಕ್ಷೇತ್ರದಿಂದ ಆಯ್ಕೆ ಬಯಸಿ ಬಿಜೆಪಿ ಮತ್ತು ಕಾಂಗ್ರೆಸ್ ಪಕ್ಷದ ಹುರಿಯಾಳುಗಳು ಪಟ್ಟಣದಲ್ಲಿ ಮಂಗಳವಾರ ತಮ್ಮ ಸಹಸ್ರಾರು ಕಾರ್ಯಕರ್ತರು, ಬೆಂಬಲಿಗರೊಂದಿಗೆ ರೋಡ್ ಶೋ ನಡೆಸಿ ಉಮೇದುವಾರಿಕೆ ಸಲ್ಲಿಸಿದರು.

ಬಿಜೆಪಿಯ ನಿಖಿಲ್ ಕತ್ತಿ ಮತ್ತು ಕಾಂಗ್ರೆಸ್‌ನ ಎ.ಬಿ.ಪಾಟೀಲ ಅವರು ತಮ್ಮ ಉಮೇದುವಾರಿಕೆ ಸಲ್ಲಿಸುವ ಮುನ್ನ ವಿವಿಧ ದೇವಸ್ಥಾನಗಳಿಗೆ ತೆರಳಿ ಪೂಜೆ ಸಲ್ಲಿಸಿದರು. ಟೆಂಪಲ್ ರನ್ ನಡೆಸಿದ ಉಭಯ ಪಕ್ಷಗಳ ಹುರಿಯಾಳುಗಳು ಈ ಬಾರಿ ಗೆಲುವು ತಮ್ಮದಾಗಬೇಕು ಎಂದು ದೇವಸ್ಥಾನಗಳಲ್ಲಿ ಪ್ರಾರ್ಥಿಸಿಕೊಂಡರು.

ಎರಡೂ ಪಕ್ಷದ ಅಭ್ಯರ್ಥಿಗಳು ಒಂದೇ ದಿನ ನಾಮಪತ್ರ ಸಲ್ಲಿಸಿದ್ದರಿಂದ ಪಟ್ಟಣದ ಕೋರ್ಟ್ ಸರ್ಕಲ್‌ನಲ್ಲಿ ಕೆಲಹೊತ್ತು ವಾಹನ ಮತ್ತು ಜನಸಂಚಾರದಿಂದ ಟ್ರಾಫಿಕ್ ಜಾಮ್ ಆಗಿ ಸಂಚಾರಕ್ಕೆ ಅಡಚಣೆಯಾಯಿತು. ಇನ್ನು ಬಿಜೆಪಿ ಮತ್ತು ಕಾಂಗ್ರೆಸ್ ಪಕ್ಷದ ರೋಡ್ ಶೋ ಪರಸ್ಪರ ಎದುರಾದವು.

ಈ ವೇಳೆ ಉಭಯ ಪಕ್ಷಗಳ ಕಾರ್ಯಕರ್ತರು ತಮ್ಮ ತಮ್ಮ ಅಭ್ಯರ್ಥಿಗಳ ಪರ ಘೋಷಣೆ ಕೂಗಿದ್ದರಲ್ಲದೇ ಜಯಕಾರ ಹಾಕಿದರು. ಕೆಲವರ ನಡುವೆ ವಾಗ್ವಾದ ಸಹ ನಡೆಯಿತು.

ನಾಮಪತ್ರ ಸಲ್ಲಿಕೆಗೂ ಮುನ್ನ ಬಿಜೆಪಿ ಅಭ್ಯರ್ಥಿ ನಿಖಿಲ್ ಕತ್ತಿ ಅವರು ಪಿಎಲ್‌ಡಿ ಬ್ಯಾಂಕ್‌ನಿಂದ ಕೋರ್ಟ್ ಸರ್ಕಲ್, ಘಟಪ್ರಭಾ ರಸ್ತೆ ಮೂಲಕ ಮಿನಿವಿಧಾನ ಸೌಧದವರೆಗೆ ರೋಡ್ ನಡೆಸಿದರು.

ನಿಖಿಲ್‌ಗೆ ರಾಜ್ಯ ಸಭೆ ಸದಸ್ಯ ಈರಣ್ಣಾ ಕಡಾಡಿ, ಚಿಕ್ಕೋಡಿ-ಸದಲಗಾ ಬಿಜೆಪಿ ಅಭ್ಯರ್ಥಿಯೂ ಆದ ಮಾಜಿ ಸಂಸದ ರಮೇಶ ಕತ್ತಿ ಮತ್ತಿತರರು ಸಾಥ್ ನೀಡಿದರು. ಇನ್ನು ಕಾಂಗ್ರೆಸ್ ಅಭ್ಯರ್ಥಿ ಎ.ಬಿ.ಪಾಟೀಲ ಕೂಡ ಸಹಸ್ರಾರು ಕಾರ್ಯಕರ್ತರೊಂದಿಗೆ ತೆರೆದ ವಾಹನದಲ್ಲಿ ಕೋರ್ಟ್ ಸರ್ಕಲ್‌ನಿಂದ ತಹಸೀಲದಾರ ಕಚೇರಿಗೆ ತೆರಳಿ ತಮ್ಮ ಉಮೇದುವಾರಿಕೆ ದಾಖಲಿಸಿದರು. ಎಬಿಪಿಗೆ ಮಾಜಿ ಸಚಿವ ಶಶಿಕಾಂತ ನಾಯಿಕ, ಹಿರಿಯ ಮುಖಂಡ ಡಿ.ಟಿ.ಪಾಟೀಲ ಮತ್ತಿತರರು ಸಾಥ್ ನೀಡಿದರು.

## ಆಮ್ ಆದ್ಮಿ ಪಾರ್ಟಿ ವತಿಯಿಂದ ರಾಜಕುಮಾರ ಟೋಪಣ್ಣವರ ನಾಮಪತ್ರ ಸಲ್ಲಿಕೆ



ಬೆಳಗಾವಿ: ಬೆಳಗಾವಿಯಲ್ಲಿ ಬಿಜೆಪಿ, ಕಾಂಗ್ರೆಸ್ ನಾಯಕರು ಯಾರು ಎನ್ನುವುದು ತಿಳಿಯದಾಗಿದೆ. ಒಳಗೊಳಗೆ ಹೊಂದಾಣಿಕೆಯ ರಾಜಕಾರಣ ಮಾಡಿಕೊಂಡಿದ್ದಾರೆ.

ಆಮ್ ಆದ್ಮಿಗೆ ಬೆಳಗಾವಿ ಜನತೆ ಆಶೀರ್ವಾದ ಮಾಡಿದರೆ ಐದು ವರ್ಷದಲ್ಲಿ ಕಾಂಗ್ರೆಸ್,ಬಿಜೆಪಿ ಮಾಡದ ಅಭಿವೃದ್ಧಿ ಮಾಡಿ ತೋರಿಸುತ್ತೇನೆ ಎಂದು ಆಮ್ ಆದ್ಮಿ ಪಾರ್ಟಿಯ ಉತ್ತರ ಮತಕ್ಷೇತ್ರದ ಅಭ್ಯರ್ಥಿ ರಾಜಕುಮಾರ ಟೋಪಣ್ಣವರ ಮನವಿ ಮಾಡಿದರು.

ಮಂಗಳವಾರ ಕೊಲ್ಲಾಪುರ ವೃತ್ತದಿಂದ ತಮ್ಮ ಅಪಾರ ಅಭಿಮಾನಿಗಳು, ಆಪ್ ಕಾರ್ಯಕರ್ತರೊಂದಿಗೆ ಪಾಲಿಕೆಗೆ ತೆರಳಿ ನಾಮಪತ್ರ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.

ಈ ಸಂದರ್ಭದಲ್ಲಿ ಆಮ್ ಆದ್ಮಿ ಜಿಲ್ಲಾಧ್ಯಕ್ಷ ಶಂಕರ ಹೆಗಡೆ, ಶಿವಾನಂದ ಕಾರಿ, ಸುನೀತಾ ಪಾಟೀಲ, ವಿಜಯ ಪಾಟೀಲ, ಜುನೈದ್ ಖಾನ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಪಕ್ಷೇತರ ಅಭ್ಯರ್ಥಿಯಾಗಿ ಮಾಜಿ ಶಾಸಕ ಡಾ.ವಿಶ್ವನಾಥ ಪಾಟೀಲ ನಾಮಪತ್ರ ಸಲ್ಲಿಕೆ



ಬೈಲಹೊಂಗಲ: ಪಕ್ಷೇತರ ಅಭ್ಯರ್ಥಿಯಾಗಿ ಮಾಜಿ ಶಾಸಕ ಡಾ.ವಿಶ್ವನಾಥ ಪಾಟೀಲ ಸರಳವಾಗಿ ತಮ್ಮ ಬೆಂಬಲಿಗರೊಂದಿಗೆ ತೆರಳಿ ಚುನಾವಣಾಧಿಕಾರಿ ಅವರಿಗೆ ನಾಮಪತ್ರ ಸಲ್ಲಿಸಿದರು.

ನಂತರ ಮಾತನಾಡಿದ ಅವರು ಬಿಜೆಪಿ ಟಿಕೇಟ್ ಕೊನೆಗಳಿಗೆಯಲ್ಲಿ ಕೈ ತಪ್ಪಿದೆ. ಪಕ್ಷ ವಿರೋಧಿ ಚಟುವಟಿಕೆ ಮಾಡಿದವರಿಗೆ ಟಿಕೇಟ್ ನೀಡಿದ ಹಿನ್ನಲೆಯಲ್ಲಿ ಕ್ಷೇತ್ರದಲ್ಲಿ ಜನಾಭಿಪ್ರಾಯ ಸಂಗ್ರಹಿಸಿ, ಮತದಾರರ, ಅಭಿಮಾನಿಗಳ ಒತ್ತಾಯದ ಮೇರೆಗೆ ನಾನು ಪಕ್ಷೇತರ ಅಭ್ಯರ್ಥಿಯಾಗಿ ಸ್ಪಧಿಸುತ್ತಿದ್ದೆನೆ. ಕ್ಷೇತ್ರದ ಜನತೆ ನನ್ನ ಕೈ ಹಿಡಿಯುವ ವಿಶ್ವಾಸವಿದ್ದು, ಜನತೆಯ ಆಶೀರ್ವಾದದಿಂದ ಆಯ್ಕೆಯಾಗಿ ಕ್ಷೇತ್ರವನ್ನು ಪ್ರಾಮಾಣಿಕವಾಗಿ, ಸಮಗ್ರವಾಗಿ ಅಭಿವೃದ್ದಿಪಡಿಸುವೆ ಎಂದರು.

ಅಮಿತ ವಿಶ್ವನಾಥ ಪಾಟೀಲ, ಮಡಿವಾಳಪ್ಪ ಚಳಕೊಪ್ಪ, ಮಡಿವಾಳಪ್ಪ ಹೋಟಿ, ದುಂಡೇಶ ಗರಗದ, ವಿರೇಂದ್ರ ಸಂಗೊಳ್ಳಿ, ಪ್ರಭಾಕರ ಭಜಂತ್ರಿ, ಈರಣ್ಣ ಮುರಗೋಡ, ಮಡಿವಾಳಪ್ಪ ಚಿಕ್ಕೊಪ್ಪ, ಶ್ರೀಶೈಲ ಬೈಲವಾಡ, ಸಿದ್ಧಾರೂಢ ಹೊಂಡಪ್ಪನವರ, ಎಂ.ಎಂ. ಅಲ್ಲಯ್ಯನವರಮಠ, ವಿ.ಸಿ. ಪೂಜೇರ, ರಿತೇಶ ಪಾಟೀಲ ಹಾಗೂ ಕಾರ್ಯಕರ್ತರು ಇದ್ದರು.

## ಶಾಸಕಿ ಅಂಜಲಿ ನಿಂಬಾಳ್ಕರ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಕೆ



ಖಾನಾಪುರ(ಗ್ರಾ): ತಾಲೂಕಿನ ಸರ್ವಾಂಗಿನ ಅಭಿವೃದ್ಧಿಯೇ ನನ್ನ ಮೊದಲ ಗುರಿ. ಹೀಗಾಗಿ ನನಗೆ ಸಿಕ್ಕ ಮೊದಲ ಐದು ವರ್ಷದ ಅವಧಿಯಲ್ಲಿಯೇ ತಾಲೂಕಿನ ವಿವಿಧ ಗ್ರಾಮಗಳ ರಸ್ತೆ, ಚರಂಡಿ, ಕುಡಿಯುವ ನೀರು, ರೈತರಿಗಾಗಿ ಬ್ರಿಜ್ ಕಾಮ್ ಬ್ಯಾರೇಜ್, ಶಾಲಾ ಮಕ್ಕಳಿಗಾಗಿ ಅಂಗನವಾಡಿ ಕೊಠಡಿಗಳ ಜೀರ್ಣೋದ್ಧಾರ ಹಾಗೂ ಪ್ರಾಥಮಿಕ ಪ್ರೌಢಶಾಲೆಗಳ ಕಟ್ಟಡ ನಿರ್ಮಾಣ, ಉತ್ತಮ ಆರೋಗ್ಯಕ್ಕಾಗಿ ಆಸ್ಪತ್ರೆಗಳ ಅಭಿವೃದ್ಧಿ ಕಾರ್ಯ, ಹೀಗೆ ವಿವಿಧ ಬಗೆಯ ಯೋಜನೆಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕಳೆದ ಐದು ವರ್ಷದ ಅವಧಿಯಲ್ಲಿ ನಾನು ಶಾಸಕನಾಗಿ ಅತ್ಯಂತ ನಿಷ್ಠೆಯಿಂದ ಮಾಡಿರುತ್ತೇನೆ ಎಂದು ಖಾನಾಪುರ ಶಾಸಕಿ ಅಂಜಲಿ ನಿಂಬಾಳ್ಕರ್ ಹೇಳಿದರು.

ಪಟ್ಟಣದಲ್ಲಿರುವ ತಹಶೀಲ್ದಾರ್ ಕಾರ್ಯಾಲಯದಲ್ಲಿ ಚುನಾವಣಾ ಅಧಿಕಾರಿ ಅನುರಾಧ ವಸ್ತ್ರದ ಅವರಿಗೆ ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿ ತದನಂತರ ಪತ್ರಕರ್ತರು ಉದ್ದೇಶಿಸಿ ಮಾತನಾಡಿದರು.

ನಾಮಪತ್ರ ಸಲ್ಲಿಸುವ ಮುಂಚಿತವಾಗಿ ಖಾನಾಪುರದ ಆದಿದೇವತೆ ಚೌರಾಶಿ ದೇವಿ ಮಂದಿರಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿ ತದನಂತರ ಸಾವಿರಾರು ಕಾರ್ಯಕರ್ತರು ಮತ್ತು ಅಭಿಮಾನಿಗಳ ಜೊತೆಗೂಡಿ ತಾಲೂಕಿನ ಪ್ರಮುಖ ಬೀದಿಗಳಲ್ಲಿ ಬರುವ ಹಜರತ್ ಟಿಪ್ಪು ಸುಲ್ತಾನ್ ಚೌಕ್, ಸಂಭಾಜಿ ಮಹಾರಾಜ ಮೂರ್ತಿ, ರವಳನಾಥ ಮಂದಿರ, ಮಹಾಲಕ್ಷ್ಮಿ ಮಂದಿರ ಹನುಮಾನ್ ಮಂದಿರ, ಹಜರತ್ ಖಾದ್ರಿ ಶಾ ದರ್ಗಾ ಹಾಗೂ ಶಿವ ಸ್ಮಾರಕ ವೃತದಲ್ಲಿರುವ ಛತ್ರಪತಿ ಶಿವಾಜಿ ಮಹಾರಾಜರ ಭವ್ಯವಾದ ಮೂರ್ತಿಗೆ ಬೃಹದಾಕಾರದ ಹೂಮಾಲೆಯನ್ನು ಹಾಕಿ ಗೌರವಿಸಿ ಆಶೀರ್ವಾದ ಪಡೆದುಕೊಂಡು ತದನಂತರ ತಹಶೀಲ್ದಾರ್ ಕಾರ್ಯಾಲಯಕ್ಕೆ ತೆರಳಿ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಈ ಎಐಸಿಸಿ ಕಾರ್ಯದರ್ಶಿ ವಿಶ್ವನಾಥನ್, ಕೆಪಿಸಿಸಿ ಕಾರ್ಯದರ್ಶಿ ಸುನಿಲ್ ಹನುಮನ್ನವರ್, ಮೈನಾರಿಟಿ ರಾಜ್ಯ ಉಪಾಧ್ಯಕ್ಷ ರಿಯಾಜ್ ಅಹ್ಮದ್ ಪಟೇಲ್, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಮಲ್ಲಿಕಾರ್ಜುನ್ ವಾಲಿ, ಚಂಬಣ್ಣ ಹೊಸಮನಿ, ಶಂಕರಗೌಡ ಪಾಟೀಲ್, ಕಾಶೀಮ ಹಟ್ಟಿಹೋಳಿ, ರಾಯಪ್ಪ ಬಳಗಪ್ಪನವರ, ಅಲ್ತಾಪ್ ಬಸರಿಕಟ್ಟಿ, ಪಾಂಡುರಂಗ ಮಿಟಗಾರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಹಾದೇವ್ ಕೋಳಿ, ಮಧು ಕವಳೇಕರ್, ಅನಿತಾ ದಂಡಗಲ, ಗೀತಾ ಅಂಬಡಗಟ್ಟಿ, ಮಹಾಂತೇಶ ಕಲ್ಯಾಣಿ, ದೀಪಾ ಪಾಟೀಲ, ಭೀಮಪ್ಪ ಅಂಬುಜಿ ಹಾಗೂ ಸಾವಿರಾರು ಸಂಖ್ಯೆಯ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು.

## ನಾಗೇಂದ್ರ, ಮುನ್ನಾಬಾಯ್ ನಾಮಪತ್ರ ಸಲ್ಲಿಕೆ



ಬಳ್ಳಾರಿ: ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಮಂಗಳವಾರ ನಾಲ್ಕನೇ ಬಾರಿಗೆ ಶಾಸಕರಾಗಲು ಬಯಸಿ ಡಿಸಿ ಕಚೇರಿ ಆವರಣದಲ್ಲಿರುವ ಎಸಿ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಲಿದ್ದಾರೆ.

ಈ ಮೊದಲು ಎರೆಡು ಬಾರಿ ಕೂಡ್ಲಿಗಿಯಿಂದ ಬಿಜೆಪಿ ಮತ್ತು ಪಕ್ಷೇತರ ಶಾಸಕರಾಗಿ. ಕಳೆದ ಬಾರಿ ಗ್ರಾಮೀಣ ಕ್ಷೇತ್ರದಿಂದ ಕಾಂಗ್ರೆಸ್ ಶಾಸಕರಾಗಿ ಆಯ್ಕೆಯಾಗಿದ್ದರು.

ಈ ಬಾರಿ ಪ್ರಬಲ ಪ್ರತಿಸ್ಪರ್ಧಿ ಸಚಿವ ಬಿ.ಶ್ರೀರಾಮುಲು ವಿರುದ್ದ ಸೆಣಸಬೇಕಾಗಿದೆ.

ಜೆಡಿಎಸ್ ಅಭ್ಯರ್ಥಿಯಾಗಿ ಮುನ್ನಾಬಾಯ್ ನಗರ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಲಿದ್ದಾರೆ. ಪಕ್ಷದ ಕಚೇರಿಯಿಂದ ತಮ್ಮ ಬೆಂಬಲಿಗರ ಮೂಲಕ ಮೆರವಣಿಗೆ ಮೂಲಕ ಬಂದು ಪಾಲಿಕೆ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಲಿದ್ದಾರೆ.



## ಬಿಜೆಪಿ ಅಭ್ಯರ್ಥಿ ಎಂ. ಎಸ್.ಸೋಮಲಿಂಗಪ್ಪ ನಾಮಪತ್ರ ಸಲ್ಲಿಕೆ

ಬಳ್ಳಾರಿ: ಬಳ್ಳಾರಿ ಜಿಲ್ಲೆಯ ಸಿರುಗುಪ್ಪದ ಬಿಜೆಪಿ ಅಭ್ಯರ್ಥಿಯಾಗಿ ಎಂ.ಎಸ್. ಸೋಮಲಿಂಗಪ್ಪನವರು ಅಪಾರ ಬೆಂಬಲಿಗರೊಂದಿಗೆ, ಅಪಾರ ಜನಸಾಗರದೊಂದಿಗೆ ಮಂಗಳವಾರ ನಾಮಪತ್ರ ಸಲ್ಲಿಸಿದರು.

ನಗರದ ತಾಲ್ಲೂಕು ಕ್ರಿಡಾಂಗಣದಿಂದ ಅಪಾರ ಪ್ರಮಾಣದ ಬೆಂಬಲಿಗರೊಂದಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಗಾಂಧೀ ವೃತ್ತದ ಮೂಲಕ ಸಂಚರಿಸಿ ಚುನಾವಣಾಧಿಕಾರಿಗಳ ಕಛೇರಿ ತಲುಪಿ ನಾಮಪತ್ರ ಸಲ್ಲಿಸಿದರು.




## ಕಂಪ್ಲಿ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಜೆ.ಎನ್. ಗಣೇಶ್ ನಾಮಪತ್ರ ಸಲ್ಲಿಕೆ

ಬಳ್ಳಾರಿ: ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಜೆ.ಎನ್. ಗಣೇಶ್ ಅವರು ಮಂಗಳವಾರ ನಾಮಪತ್ರ ಸಲ್ಲಿಸಿದರು.

ಕಂಪ್ಲಿ ಪುರಸಭೆ ಕಾರ್ಯಾಲಯದಲ್ಲಿ ಚುನಾವಣಾ ಅಧಿಕಾರಿಯಾಗಿರುವ ಡಾ. ಎನ್.ನಯನಾ ಅವರಿಗೆ ನಾಮಪತ್ರ ಸಲ್ಲಿಸಿದರು.

ಇದಕ್ಕೂ ಮುನ್ನ ಪಕ್ಷದ ಬೆಂಬಲಿಗರು, ಕಾರ್ಯಕರ್ತರು ಸೇರಿಕೊಂಡು ಉದ್ಭವ ಗಣೇಶನ ದರ್ಶನ ಪಡೆದು ಮೆರವಣಿಗೆ ಮೂಲಕ ಪುರಸಭೆ ಕಾರ್ಯಾಲಯಕ್ಕೆ ಬಂದು ಜೆ.ಎನ್. ಗಣೇಶ್ ಅವರು ನಾಮಪತ್ರ ಸಲ್ಲಿಸಿದರು.

ಚುನಾವಣೆ ಹಿನ್ನಲೆಯಲ್ಲಿ ನೂರು ಮೀಟ–ರನಲ್ಲಿ ಸಾರ್ವಜನಿಕರ ಓಡಾಟ ನಿಷೇಧಿಸಿತ್ತು. ನಿಷೇಧಿದ ಪ್ರದೇಶದ ಒಳಗೆ ಬಾರದಂತೆ ಮಿಲಿಟರಿ ಹಾಗೂ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಮಾಜಿ ಸಂಸದ ವಿ.ಎಸ್.ಉಗ್ರಪ್ಪ, ಶ್ರೀನಿವಾಸ್ ರಾವ್, ಕೆ. ಷಣ್ಮುಕಪ್ಪ, ಬಿ.ಸದಾಶಿವಪ್ಪ ಇದ್ದರು.

## ವಿಜೃಂಭಣೆಯಿಂದ ನಾರಾಭರತ್ ರೆಡ್ಡಿಯಿಂದ ನಾಮಪತ್ರ ಸಲ್ಲಿಕೆ





ಬಳ್ಳಾರಿ: ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾದ ನಾರಾ ಭರತ್ ರೆಡ್ಡಿ ಮಹಾನಗರ ಪಾಲಿಕೆ ಕಚೇರಿಯಲ್ಲಿ ಚುನಾವಣಾಧಿಕಾರಿ ರುದ್ರೇಶ್‌ರವರಿಗೆ ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದರು.

ಬೆಳಗ್ಗೆ 9ಗಂಟೆಗೆ ಬಳ್ಳಾರಿ ನಗರದ ಅಧಿದೇವತೆ ಶ್ರೀ ಕನಕ ದುರ್ಗಮ್ಮ ದೇವಿಗೆ ವಿಶೇಷವಾದ ಪೂಜೆ ಕಾರ್ಯಕ್ರಮಗಳನ್ನು ನಡೆಸಿ ಅಪಾರ ಬೆಂಬಲಿಗರು ಮತ್ತು ಕಾಂಗ್ರೆಸ್ ಪಕ್ಷದ ಹಾಲಿ ಮಾಜಿ ಶಾಸಕರು, ವಿಧಾನ ಪರಿಷತ್ ಸದಸ್ಯರು, ಸಂಸದರು, ಪಕ್ಷದ ಜಿಲ್ಲಾ ಪದಾಧಿಕಾರಿಗಳೊಂದಿಗೆ ಪಾಲಿಕೆ ಕಚೇರಿಗೆ ಪಾದಯಾತ್ರೆಯ ಮುಖಾಂತರ ಆಗಮಿಸಿ ನಾಮಪತ್ರವನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಅಲ್ಲಂ ವೀರಭದ್ರಪ್ಪ, ರಾಜ್ಯ ಸಭಾ ಸದಸ್ಯ ನಾಸೀರ್ ಹುಸೇನ್, ಹಾಲಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಮುಂಡ್ಲೂರ್ ಅನೂಪ್‌ಕುಮಾರ್, ಮುಲ್ಲಂಗಿ ರವೀಂದ್ರ ಬಾಬು, ಜೆ.ಎಸ್. ಆಂಜನೇಯಲು, ರಾವುರ್ ಸುನಿಲ್, ರಾಮರಾಜು ಕಾಂಗ್ರೆಸ್‌ನ ಮಹಾನಗರ ಪಾಲಿಕೆ ಸದಸ್ಯರು, ಅಪಾರ ಕಾಂಗ್ರೆಸ್, ಬೆಂಬಲಿಗರು ಹಲವಾರು ಮುಖಂಡರು ಭಾಗಿಯಾಗಿದ್ದರು.

## ಬೃಹತ್ ಮೆರವಣಿಗೆ ಮೂಲಕ ಬಿ.ಶ್ರೀರಾಮುಲು ನಾಮಪತ್ರ ಸಲ್ಲಿಕೆ



ಬಳ್ಳಾರಿ: ಬಳ್ಳಾರಿ ಗ್ರಾಮಿಣ ಕ್ಷೇತ್ರದಿಂದ ಸಚಿವ ಬಿ.ಶ್ರೀರಾಮುಲು ಅವರು ಬಿಜೆಪಿ ಅಭ್ಯರ್ಥಿಯಾಗಿ ಚುನಾವಣಾಧಿಕಾರಿ ಸಹಾಯಕ ಆಯುಕ್ತ ಹೇಮಂತ್ ಅವರಿಗೆ ನಾಮಪತ್ರ ಸಲ್ಲಿಸಿದರು.ಇದಕ್ಕೂ ಮುನ್ನ ಅವರು ಅಲಂಕೃತ ವಾಹನದಲ್ಲಿ ನಗರ ಶಾಸಕ ಗಾಲಿ ಸೋಮಶೇಖರ ರೆಡ್ಡಿ, ಮಾಜಿ ಸಂಸದರಾದ ಸಣ್ಣ ಪಕ್ಕೀರಪ್ಪ, ಜೆ.ಶಾಂತಾ ಮೊದಲಾದವರೊಂದಿಗೆ ಟಿ.ಬಿ.ಸ್ಯಾನಿಟೋರಿಯಂನಿಂದ ಕೌಲ್ ಬಜಾರ್ ಮೂಲಕ ಬೃಹತ್ ಮೆರವಣಿಗೆ ಮೂಲಕ ಡಿಸಿ ಕಚೇರಿಗೆ ಆಗಮಿಸಿದರು. ನಗರ ಮತ್ತು ಗ್ರಾಮೀಣ ಪ್ರದೇಶದಿಂದ ಸಾವಿರಾರು ಜನ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಆರನೇ ಬಾರಿಗೆ ಶಾಸಕರಾಗಲು ಬಯಸಿ ನಾಮಪತ್ರ ಸಲ್ಲಿಸಿದ್ದಾರೆ. 2004 ರಲ್ಲಿ ಬಳ್ಳಾರಿ ಕ್ಷೇತ್ರದಿಂದ. 2008, 2011, 2013 ರಲ್ಲಿ ಬಳ್ಳಾರಿ ಗ್ರಾಮೀಣ ಕ್ಷೇತ್ರದಿಂದ ಮತ್ತು 2018 ರಲ್ಲಿ ಮೊಳಕಾಲ್ಮುರು ಕ್ಷೇತ್ರದ ಶಾಸಕರಾಗಿದ್ದರು.ಈ ಬಾರಿ ಈ ಕ್ಷೇತ್ರದಿಂದ ಸ್ಪರ್ಧಿಸಿ ತಮ್ಮದೇ ಆದ ರೀತಿಯಲ್ಲಿ ಗೆಳೆತನ ಹೊಂದಿದ್ದ ಬಿ.ನಾಗೇಂದ್ರ ವಿರುದ್ಧ ಈಗ ಪ್ರಬಲ ಸ್ಪರ್ಧೆಯನ್ನು ಎದು–ರಿಸಬೇಕಿದೆ.

## ಗೀತಾ ಕೌಲಗಿಯವರಿಗೆ ಮಹಾಂತೇಶ ಕಡಾಡಿ ನಾಮಪತ್ರ ಸಲ್ಲಿಕೆ

**ಗೋಕಾಕ:** ಕಾಂಗ್ರೇಸ್ ಅಭ್ಯರ್ಥಿ ಡಾ.ಮಹಾಂತೇಶ ಕಡಾಡಿ ನಗರದ ದ್ಯಾಮವ್ವನ ಗುಡಿಯಿಂದ ಕಾಂಗ್ರೇಸ್ ಕಾರ್ಯಕರ್ತರೊಂದಿಗೆ ಮೆರವಣಿಗೆ ಮೂಲಕ ಆಗಮಿಸಿ ಚುನಾವಣಾ ಅಧಿಕಾರಿ ಗೀತಾ ಕೌಲಗಿಯವರಿಗೆ ನಾಮಪತ್ರ ಸಲ್ಲಿಕೆ ಮಾಡಿದರು.

ಕಾಂಗ್ರೇಸ್ ಅಭ್ಯರ್ಥಿ ಕಡಾಡಿಯವರಿಗೆ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ, ಚಂದ್ರಶೇಖರ ಕೊಣ್ಣೂರ ಸೇರಿದಂತೆ ಕಾಂಗ್ರೇಸ್ ಮುಖಂಡರು ಸಾಥ್ ನೀಡಿದರು.

ಇದೇ ಸಂದರ್ಭದಲ್ಲಿ ಪತ್ರಕರ್ತರೊಂದಿಗೆ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಮಾತನಾಡಿ, ಕಳೆದ ಬಾರಿ ರಾಹುಕಾಲದಲ್ಲಿ ನಾಮಪತ್ರ ಸಲ್ಲಿಸಿದ್ದೆ. ಅಮವಾಸ್ಯೆಯ ದಿನ ಎಪ್ರೀಲ್ 20ರಂದು ನಾಮಪತ್ರ ಸಲ್ಲಿಕೆ ಮಾಡುತ್ತೇನೆ. ಈ ಬಾರಿ ಅಮವಾಸ್ಯೆಯ ರಾಹುಕಾಲದಲ್ಲಿ ನಾಮಪತ್ರ ಮಾಡುತ್ತೇನೆ ಮೌಢ್ಯಕ್ಕೆ ಸೆಡ್ಡು ಹೊಡೆಯುವದಾಗಿ ತಿಳಿಸಿದರು.

ರಾಜ್ಯದಲ್ಲಿ ಕಾಂಗ್ರೇಸ್ ಗಾಳಿ ಬಿಸುತ್ತಿದೆ. ಬಿಜೆಪಿ 4ವರ್ಷದಲ್ಲಿ ಅಭಿವೃದ್ಧಿ ಮಾಡದೇ ಭ್ರಷ್ಟಾಚಾರ ಮಾಡಿದ್ದಾರೆ. ಇದನ್ನು ಮುಂದಿಟ್ಟುಕೊಂಡು ನಾವು ಮತ ಕೇಳುತ್ತಿದ್ದೇವೆ. ಟಿಕೇಟ್ ವಚಿಚಿತ ಅಶೋಕ ಪೂಜಾರಿಯವರ ಮನವೊಲಿಸುವ ನಿಟ್ಟಿನಲ್ಲಿ ಒಂದು ಸುತ್ತಿನ ಮಾತುಕತೆ ಮಾಡಿದ್ದೇವೆ. ಮತ್ತೆ ಮಾತುಕತೆ ನಡೆಸಿ ಕಾಂಗ್ರೇಸ್ ಅಭ್ಯರ್ಥಿಪರ ಪ್ರಚಾರ ನಡೆಸಲು ತಿಳಿಸುವದಾಗಿ ಹೇಳಿದರು.

ಬಿಜೆಪಿ ಟಿಕೇಟ್ ವಂಚಿತ ನಾಯಕರನ್ನು ನಾವೇನು ಕರೆತರುತ್ತಿಲ್ಲ ನಮ್ಮ ಪಕ್ಷದ ಸಿದ್ಧಾಂತ ಒಪ್ಪಿ ಬರುತ್ತಿದ್ದಾರೆ. ಆಪರೇಶನ್ ಅಚಿತಾ ಏನಿಲ್ಲ. ಇನ್ನು ಬಂದರೆ ಇನ್ನೂ ತೆಗೆದುಕೊಳ್ಳುತ್ತೇವೆ. ಈಗಾಗಲೇ ಶಟ್ಟರಗೆ ಸವದಿಗೆ ಸ್ಥಾನ ಮಾನ ಕೊಟ್ಟಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಮುಕ್ತ ಭಾರತ ಎಂದು ಬಿಜೆಪಿ ನಾಯಕರು ಹೇಳಿಕೆ ವಿಚಾರವಾಗಿ ಮಾತನಾಡಿದ ಅವರು ಕಾಂಗ್ರೇಸ್ ಮುಕ್ತವಾಗಲ್ಲ ಅವರೇ ತಮ್ಮ ಪಕ್ಷ ಮುಕ್ತ ಮಾಡುತ್ತಿದ್ದಾರೆ. ಬಿಜೆಪಿಯವರೇ ಬಿಜೆಪಿ ಮುಕ್ತ ಮಾಡಲು ಹೊರಟಿದ್ದಾರೆ ಇದು ದೇಶದಲ್ಲಿ ಒಳ್ಳೆಯ ಬೆಳವಣಿಗೆ. ಬೆಳಗಾವಿ ಜಿಲ್ಲೆಯಲ್ಲಿ 10 ಸ್ಥಾನ ಗೆಲ್ಲುವ ಟಾರ್ಗೆಟ್ ಮಾಡಿದ್ದಿವಿ. ಇತ್ತಿಚಿನ ಬೆಳವಣಿಗೆ ಗಮನಿಸಿದರೇ 12 ಸ್ಥಾನ ಕಾಂಗ್ರೇಸ್ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.




## ಪೂರ್ವದಲ್ಲಿ ಆಪ್ ಬಿರುಸಿನ ಪ್ರಚಾರ

**ಹುಬ್ಬಳ್ಳಿ:** ಪೂರ್ವ ಮತಕ್ಷೇತ್ರದಲ್ಲಿ ಹಾಲಿ ಶಾಸಕರ ವಿರುದ್ಧ ವಿರೋಧಿ ಅಲೆ ಎದ್ದು ಕಾಣುತ್ತಿದ್ದು, ಆಮ್ ಆದ್ಮಿ ಪಕ್ಷದ ಪರವಾದ ಅಲೆ ಕಂಡು ಬರುತ್ತಿದೆ ರೂಪಾ ಮಾಳವದೆ ಹೇಳಿದರು.

ಮತಕ್ಷೇತ್ರದ ವ್ಯಾಪ್ತಿಯ ಗಣೇಶ ಪೇಟ, ತಬೀಬಲಾಂಡ್ ಸೇರಿದಂತೆ ವಿವಿಧ ಪ್ರದೇಶ ಗಳಲ್ಲಿ ಮಂಗಳವಾರ ಆಮ್ ಆದ್ಮಿ ಪಕ್ಷದ ಅಭ್ಯರ್ಥಿ ಬಸವರಾಜ ತೇರದಾಳ ಅವರ ಪರವಾಗಿ ಬಿರುಸಿನ ಪ್ರಚಾರ ನಡೆಸಿ ಮಾತನಾಡಿದರು. ರಾಕೇಶ್ ಪಾವಟೆ, ಸಂತೋಷ ವಿ. ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಪ್ರಚಾರದಲ್ಲಿ ಪಾಲ್ಗೊಂಡಿದ್ದರು.



## ಅಭಿವೃದ್ಧಿ ಕಾರ್ಯ ಮನೆ ಮನೆಗೆ ಮುಟ್ಟಿಸಿ

**ಹುಬ್ಬಳ್ಳಿ:** ಬಿಜೆಪಿ ಪೂರ್ವ ವಿಧಾನಸಭಾ ಕ್ಷೇತ್ರ ವಾರ್ಡ್ ಪ್ರಮುಖರ ಸಭೆ ಹಾಗೂ ಚುನಾವಣೆಯ ಕಾರ್ಯಾಲಯ ಉದ್ಘಾಟನೆಯನ್ನು ಸ್ಟೇಶನ್ ರಸ್ತೆಯ ಸ್ವರ್ಣ ಪ್ಯಾರಡೈಸ್‌ನಲ್ಲಿ ನೆರವೇರಿಸಲಾಯಿತು.

ಬಿಜೆಪಿ ರಾಜ್ಯ ಶಿಸ್ತು ಸಮಿತಿಯ ಅಧ್ಯಕ್ಷ ಲಿಂಗರಾಜ್ ಪಾಟೀಲ್ ಮಾತನಾಡಿ ಮನೆ ಸಂಪರ್ಕ, ಬೂತ್ ಮಟ್ಟದ ಸಂಘಟನೆ ಹಾಗೂ ಪಕ್ಷ ಬಲವರ್ಧನೆಯ ಕುರಿತಾಗಿ ಮಾಹಿತಿ ನೀಡಿ ಮತದಾರರಿಗೆ ಬಿಜೆಪಿ ಅಭಿವೃದ್ಧಿ ಕಾರ್ಯಗಳ ಬಗ್ಗೆ ಹೆಚ್ಚು ತಿಳಿಸಲು ಕಾರ್ಯಕ್ರಮ ಸ್ಥಳೀಯವಾಗಿ ಹಮ್ಮಿಕೊಳ್ಳಬೇಕು ಹಾಗೆಯೇ, ಕಾರ್ಯ ಕರ್ತರು ಪಕ್ಷದ ಚಟುವಟಿಕೆಗಳಲ್ಲಿ ಇನ್ನಷ್ಟು ಗಂಭೀರವಾಗಿ ತೊಡಗಿಸಿಕೊಳ್ಳುವಂತೆ ತಿಳಿಸಿದರು.

ಪೂರ್ವ ಅಧ್ಯಕ್ಷ ಪ್ರಭು ನವಲಗುಂದಮಠ, ಜಿಲ್ಲಾ ಚುನಾವಣೆ ನಿರ್ವಹಣಾ ಸಂಚಾಲಕ ಶಿವು ಮೆಣಸಿನಕಾಯಿ, ಶಶಿಧರ್ ಮೌಳಿ, ಪ್ರವಾಸಿ ಪ್ರಭಾರಿ ಪ್ರಣವಕುಮಾರ್ ಯಾದವ, ಮಾಜಿ ಶಾಸಕ ಅಶೋಕ್ ಕಾಟವೆ, ಮಾಜಿ ಪಾಲಿಕೆ ಸದಸ್ಯ ಶಿವಾನಂದ್ ಮುತ್ತಣ್ಣವರ್, ಪ್ರಧಾನ ಕಾರ್ಯದರ್ಶಿ ಜಗದೀಶ್ ಬುಳ್ಳಾನವರ, ಸಂಚಾಲಕ ರಾಜು ಜರತಾರಘರ, ಸಹ ಸಂಚಾಲಕ ಮಂಜುನಾಥ್ ಬಿಜವಾಡ ಮಾಧ್ಯಮ ಸಂಚಾಲಕರಾದ ಲಕ್ಷ್ಮೀಕಾಂತ ಘೋಡಕೆ ಇನ್ನಿತರರಿದ್ದರು.




## ಆರಾಧ್ಯ ಬದ್ನಿ ಕಿಡ್ ಮಾಡೆಲ್ ವಿನ್ನರ್

**ಧಾರವಾಡ:** ಸುದಿಶಾ ಇವೆಂಟ್ಸ್ ವತಿಯಿಂದ ಆನ್ ಲೈನ್ ವೇದಿಕೆಯ ಮೂಲಕವೇ 12 ವರ್ಷದೊಳಗಿನ ಹೆಣ್ಣು ಮಕ್ಕಳಿಗಾಗಿ ಹಮ್ಮಿಕೊಂಡಿದ್ದ ಕರ್ನಾಟಕ ಕಿಡ್ ಮಾಡೆಲ್–23 ಸ್ಪರ್ಧೆಯಲ್ಲಿ ಹುಬ್ಬಳ್ಳಿಯ ಆರಾಧ್ಯ ಬದ್ನಿ ವಿನ್ನರ್ ಆಗಿ ಹೊರ ಹೊಮ್ಮಿದ್ದಾಳೆ ಎಂದು ಸ್ಪರ್ಧೆಯ ತೀರ್ಪುಗಾತಿ ಪ್ರೀತಿ ಕಲಘಟಗಿ ಹೇಳಿದರು.


ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಸ್ಪರ್ಧೆಗೆ 45ಕ್ಕೂ ಹೆಚ್ಚು ಮಕ್ಕಳು ಪಾಲ್ಗೊಂಡಿದ್ದರು. ಈ ಎಲ್ಲ ಮಕ್ಕಳಿಗೆ ರಸಪ್ರಶ್ನೆ ಸೇರಿದಂತೆ ವಿವಿಧ ಟಾಸ್ಕಗಳನ್ನು ನೀಡಲಾಗಿತ್ತು.

ಈ ಪೈಕಿ ಉತ್ತಮ ಪ್ರದರ್ಶನ ನೀಡಿದ ಹುಬ್ಬಳ್ಳಿಯ ಆರಾಧ್ಯ ಇದೀಗ ಕರ್ನಾಟಕ ಕಿಡ್ ಮಾಡೆಲ್–23 ರ ಸ್ಪರ್ಧೆಯ ವಿನ್ನರ್ ಆಗಿದ್ದಾಳೆ. ಇದರ ಜತೆಗೆ ಧಾರವಾಡದ ರೇಣುಕಾ ಮಮದಾಪೂರ ಹಾಗೂ ಕೃತಿ ದೊಡ್ಮನಿ ರನ್ನರ್‌ಅಪ್ ಆಗಿದ್ದಾರೆ ಎಂದರು.

ರಾಘವೇಂದ್ರ ಕುಂದಗೋಳ ನೇತೃತ್ವದಲ್ಲಿ ಅವರ ಸುದಿಶಾ ಇವೆಂಟ್ಸ್ ವತಿಯಿಂದ ಈ ಸ್ಪರ್ಧೆ ಹಮ್ಮಿಕೊಳ್ಳಲಾಗಿತ್ತು. ಹಿಂದೆ ಸಾಕಷ್ಟು ವಿಭಿನ್ನ ಕಾರ್ಯಕ್ರಮ ಆಯೋಜಿಸಿದ್ದು, ಇದು 119ನೇ ಕಾರ್ಯಕ್ರಮವಾಗಿದೆ. ಈ ಸ್ಪರ್ಧೆಯ ನಿರ್ಣಾಯಕರಾಗಿ ರಾಘವೇಂದ್ರ ಕುಂದಗೋಳ ಸಹ ಕಾರ್ಯ ನಿರ್ವಹಣೆ ಮಾಡಿದ್ದಾರೆ. ಮಕ್ಕಳು ಹಾಗೂ ಪೋಷಕರಿಂದ ಈ ಸ್ಪರ್ಧೆಗೆ ಒಳ್ಳೆಯ ಸ್ಪಂದನೆ ಸಿಕ್ಕಿದೆ ಎಂದರು.

ಗೋಷ್ಠಿಯಲ್ಲಿ ರಾಘವೇಂದ್ರ ಕುಂದಗೋಳ, ವಿಜೇತ ಮಕ್ಕಳ ಪೋಷಕರಾದ ಪ್ರೀತಿ ದೊಡ್ಮನಿ, ಮಮತಾ ಮಮದಾಪೂರ, ಶೈಲಾ ಬದ್ನಿ ಇದ್ದರು.






ಹುಬ್ಬಳ್ಳಿ ಸೆಂಟ್ರಲ್ ಕ್ಷೇತ್ರದ ಬಿಜೆಪಿ ಅಧಿಕೃತ ಅಭ್ಯರ್ಥಿ ಮಹೇಶ್ ಟೆಂಗಿನಕಾಯಿ ಅವರು ಇಂದು ಮೂರುಸಾವಿರ ಮಠಕ್ಕೆ ಭೇಟಿ ನೀಡಿ ಜಗದ್ಗುರು ಗುರುಸಿದ್ಧ ರಾಜಯೋಗೀಂದ್ರ ಸ್ವಾಮೀಜಿಗಳ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ದತ್ತಮೂರ್ತಿ ಕುಲಕರ್ಣಿ, ರವಿ ನಾಯಕ, ಶಿವಾನಂದ್ ಸಣ್ಣಕ್ಕಿ, ಚೇತನ್ ಕಲಾಲ್, ಪ್ರವೀಣ ಪವಾರ್ ಮೊದಲಾದವರಿದ್ದರು.

## ಬಿಜೆಪಿಗೆ ಸಾವುಕಾರ, ಕಲಬುರ್ಗಿ ರಾಜೀನಾಮೆ



**ಹುಬ್ಬಳ್ಳಿ:** ವಾಯುವ್ಯ ಸಾರಿಗೆ ಸಂಸ್ಥೆ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಸಾವುಕಾರ ಹಾಗೂ ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ನಾಗೇಶ ಕಲಬುರ್ಗಿ ಅವರು ಸೋಮವಾರ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದಾರೆ. ಪಕ್ಷದ ಮಹಾನಗರ ಜಿಲ್ಲಾಧ್ಯಕ್ಷ ಸಂಜಯ ಕಪಟಕರ ಅವರಿಗೆ ಉಭಯ ನಾಯಕರು ರಾಜೀನಾಮೆ ಪತ್ರ ಸಲ್ಲಿಸಿದ್ದಾರೆ. ಶೆಟ್ಟರ್ ಆಪ್ತ ಬಳಗದಲ್ಲಿರುವ ಈ ಇಬ್ಬರೂ ನಾಯಕರು ಜಗದೀಶ ಶೆಟ್ಟರ್ ಕೈ ಪಕ್ಷಕ್ಕೆ ಸೇರ್ಪಡೆಯಾದ ಬೆನ್ನ ಹಿಂದೆಯೇ ರಾಜೀನಾಮೆ ಸಲ್ಲಿಸಿದ್ದಾರೆ.

## ಗೆಲುವಿಗೆ ಒಗ್ಗಟ್ಟಿನಿಂದ ಶ್ರಮಿಸೋಣ: ಶೆಟ್ಟರ್

**ಹುಬ್ಬಳ್ಳಿ:** ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಯಾದ ಶಾಸಕ ಜಗದೀಶ ಶೆಟ್ಟರ್ ಅವರನ್ನು ಸೋಮವಾರ ಕಾರವಾರ ರಸ್ತೆಯಲ್ಲಿರುವ ಕಾಂಗ್ರೆಸ್ ಕಚೇರಿಯಲ್ಲಿ ಪಕ್ಷದ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಅವರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, 'ಇದು ಚುನಾವಣಾ ಸಮಯ ವಾಗಿದ್ದು ಎಲ್ಲ ಭೇದಗಳನ್ನು ಮರೆತು ಒಗ್ಗಟ್ಟಿನಿಂದ, ಪಕ್ಷದ ಗೆಲುವಿಗೆ ಶ್ರಮಿಸೋಣ' ಎಂದು ಶೆಟ್ಟರ್ ಹೇಳಿದರು.

'ಏ. 19ಕ್ಕೆ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಕೆ ಮಾಡುತ್ತಿದ್ದು, ಎಲ್ಲರ ಸಹಕಾರ– ಬೆಂಬಲ ಕೋರುತ್ತೇನೆ. ಜೀವಮಾನದಲ್ಲಿ ಒಬ್ಬರಿಗೂ ಮೋಸ ಮಾಡಿಲ್ಲ. ಆದರೆ, ಬಿಜೆಪಿ ಇಷ್ಟು ವರ್ಷ ಪಕ್ಷದಲ್ಲಿ ಇಟ್ಟುಕೊಂಡು, ಹೊರಹೋಗುವಂತೆ ಮಾಡಿತು. ಮನಸಾರೆ ನಾನು ಕಾಂಗ್ರೆಸ್ ಸೇರ್ಪಡೆಯಾಗಿದ್ದೇನೆ ಎಂದರು.




ಮಹಾನಗರ ಜಿಲ್ಲಾ ಘಟಕದ ಅಧ್ಯಕ್ಷ ಅಲ್ತಾಫ್ ಹಳ್ಳೂರ, ಮುಖಂಡರಾದ ವಸಂತ ಲದ್ವಾ, ಎಫ್.ಎಚ್. ಜಕ್ಕಪ್ಪನವರ, ನಾಗೇಶ ಕಲಬುರ್ಗಿ, ಸಂಕಲ್ಪ ಶೆಟ್ಟರ್, ಪ್ರಕಾಶ ಕ್ಯಾರಕಟ್ಟಿ, ದಶರಥ ವಾಲಿ, ದೇವಕಿ ಯೋಗಾನಂದ, ಎಂ.ಎಸ್ .ಪಾಟೀಲ ಮುಂತಾ ದವರು ಇದ್ದರು.

ತದನಂತರ ಹು–ಧಾ ಗ್ರಾಮೀಣ ಜಿಲ್ಲಾ ಘಟಕದ ಅಧ್ಯಕ್ಷ ಅನಿಲಕುಮಾರ ಪಾಟೀಲ ಅವರ ನಿವಾಸಕ್ಕೆ ತೆರಳಿ ಔಪಚಾರಿಕವಾಗಿ ಮಾತುಕತೆ ನಡೆಸಿದರು.

## ಅಣ್ಣಾಮಲೈ ವಿರುದ್ಧ ಜಗದೀಶ್ ಶೆಟ್ಟರ್ ಕಿಡಿ

ಹುಬ್ಬಳ್ಳಿ: ಬಿಜೆಪಿ ಸರ್ಕಾರ ಇದ್ದಾಗ ನಮ್ಮ ಕೈಕೆಳಗೆ ಕೆಲಸ ಮಾಡಿದ ಐಪಿಎಸ್ ಅಧಿಕಾರಿ ಅಣ್ಣಾಮಲೈ ಹಿಂದಿನ ಸಾಲಿನಲ್ಲಿ ಮಾಜಿ ಮುಖ್ಯಮಂತ್ರಿಗಳಾದ ನಾನು ಮತ್ತು ಸದಾನಂದಗೌಡರು ಕುಳಿತುಕೊಳ್ಳಬೇಕು ಎಂದು ಅಣ್ಣಾಮಲೈ ವಿರುದ್ಧ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಕಿಡಿಕಾ–ರಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಡೀ ರಾಜ್ಯ ಬಿಜೆಪಿ ಕೆಲವರ ಕಪಿಮುಷ್ಠಿಯಲ್ಲಿದೆ. ಇದ–ರಿಂದ ಈ ರೀತಿ ಪರಿಸ್ಥಿತಿಯಿದೆ.

ಕರ್ನಾಟಕದಲ್ಲಿ ಐಪಿಎಸ್ ಅಧಿಕಾರಿಯಿದ್ದ ಅಣ್ಣಾಮಲೈ ಕರೆದುಕೊಂಡು ಹೋಗಿ ತಮಿಳುನಾಡಿನ ಬಿಜೆಪಿ ರಾಜ್ಯಾಧ್ಯಕ್ಷರನ್ನಾಗಿ ಮಾಡಿದರು. ಆದರೆ ಚುನಾವಣೆಯಲ್ಲಿ ಸೋಲಭವಿಸಿದರು.

ಒಂದು ಸಲವು ಚುನಾವಣೆಯಲ್ಲಿ ಗೆಲ್ಲದ ಈ ವ್ಯಕ್ತಿಯನ್ನು ಚುನಾವಣೆಯ ಸಹ ಉಸ್ತುವಾರಿಯಾಗಿ ನೇಮಕ ಮಾಡಿದ್ದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು.

ಕೋರ್ ಕಮಿಟಿ ಸಭೆಯಲ್ಲಿ ಈವರೆಗೆ ಅಣ್ಣಾಮಲೈ ಒಂದು ಕ್ಷೇತ್ರದ ಬಗ್ಗೆ ವಿಮರ್ಶೆ ಮಾಡಿಲ್ಲ. ಅಂತವರ ಅವರ ಮುಂದೆ ಹಿರಿಯ ನಾಯಕರು ಸಣ್ಣ ಮಕ್ಕಳಂತೆ ಕುಳಿತುಕೊಳ್ಳಬೇಕು. ನಮ್ಮ ಕೈಕೆಳಗೆ ಕೆಲಸ ಮಾಡಿದ ಐಪಿಎಸ್ ಅಧಿಕಾರಿ ಮುಂದೆ ಕುಳಿತಿದ್ದರೆ ಅವರ ಹಿಂದಿನ ಸಾಲಿನಲ್ಲಿ ನಾನು ಮತ್ತು ಸದಾನಂದಗೌಡರು ಕುಳಿತುಕೊಳ್ಳಬೇಕು. ನಾವು ಇಬ್ಬರು ಮಾಜಿ ಮುಖ್ಯಮಂತ್ರಿಗಳು. ಇಂತಹ ಅವಮಾನಗಳನ್ನು ಎದುರಿಸಿದ್ದೇನೆ ಎಂದು ಕಿಡಿಕಾರಿದರು.



ಬಿ.ಎಲ್ ಸಂತೋಷ್ ಅವರನ್ನು ಕೇರಳದಲ್ಲಿ ಉಸ್ತುವಾರಿಯಾಗಿ ನೇಮಿಸಿದಾಗ ಒಂದು ಸೀಟ್ ಬಂದಿಲ್ಲ. ಅದೇ ಪರಿಸ್ಥಿತಿ ತಮಿಳುನಾಡು ಚುನಾವಣೆ ವೇಳೆಯೂ ಆಗಿದ್ದು, ಬಿಜೆಪಿ ಒಂದೆರಡು ಸ್ಥಾನ ಪಡೆಯುವಲ್ಲಿ ಮಾತ್ರ ಯಶಸ್ವಿಯಾಯಿತು. ತೆಲಂಗಾಣ, ಕೋಲ್ಕತ್ತಾದಲ್ಲೂ ಇದೇ ಪರಿಸ್ಥಿತಿಯಾಗಿತ್ತು. ಇಷ್ಟೆಲ್ಲಾ ದಾಖಲೆಯಿದ್ದರೂ ಮತ್ತೆ ಬಿಎಲ್ ಸಂತೋಷ್ಗೆ ಕರ್ನಾಟಕದಲ್ಲಿ ಕಾರು ಬಾರು ಮಾಡುವುದಕ್ಕೆ ನೀಡಿದ್ದಾರೆ. ಇದರಿಂದ ಏನಾದರೂ ಬಿಜೆಪಿಗೆ ಲಾಭ ಆಗುತ್ತದೆಯೇ ಎಂದು ಪ್ರಶ್ನಿಸಿ ವಾಗ್ದಾಳಿ ನಡೆಸಿದರು.

ನಳಿನ್ ಕುಮಾರ್ ಕಟೀಲ್ ಸಹ ಬಿ.ಎಲ್ ಸಂತೋಷ್ ಶಿಷ್ಯರಾಗಿದ್ದಾರೆ. ಅವರು ಸಹ ಬಿ.ಎಲ್ ಸಂತೋಷ್ ಹೇಳಿದಂತೆ ಕೇಳಿದ್ದರು. ಈ ಹಿಂದೆ ಕಟೀಲ್ ಆಡಿಯೊ ವೈರಲ್ ಆಗಿದ್ದು, ಇದೆಲ್ಲ ಸಂತೋಷ್ ಗೇಮ್ ಪ್ಲ್ಯಾನ್ ಆಗಿದೆ. ಬಿ.ಎಲ್ ಸಂತೋಷ್ ಮಾನಸಪುತ್ರರಿನಿಗೆ ಟಿಕೆಟ್ ನೀಡಿದ್ದ–ರಿಂದ ಇಷ್ಟು ಅವಾಂತರ ಸೃಷ್ಟಿಯಾಗಿದೆ ಎಂದು ವಾಗ್ದಾಳಿ ನಡೆಸಿದರು.

## ಲಾಡ್ಜ ನಲ್ಲಿ ವ್ಯಕ್ತಿಯೋರ್ವ ನೇಣಿಗೆ ಶರಣು



ವಿಜಯಪುರ: ನಗರದ ಟೂರಿಸ್ಟ್ ಲಾಡ್ಜ್ನಲ್ಲಿ ವ್ಯಕ್ತಿಯೊರ್ವ ನೇಣಿಗೆ ಶರಣಾದ ಘಟನೆ ನಡೆದಿದೆ.

ಜಿಲ್ಲೆಯ ಇಂಡಿ ತಾಲೂಕಿನ ಇಂಚಗೇರಿ ನಿವಾಸಿ ನಾಗಪ್ಪ ಹಂಚಿನಾಳ (40) ಆತ್ಮಹತ್ಯೆ ಮಾಡಿಕೊಂಡ ದುರ್ದೈವಿ.

ಇತ ಬಹುದಿನಗಳಿಂದ ಮಾನಸಿಕ ಖಿನ್ನತೆಯಿಂದ ಬಳಲುತ್ತಿದ್ದನಂತೆ. ಸ್ಥಳಕ್ಕೆ ಗಾಂಧಿಚೌಕ ಪೊಲೀಸರು ಭೇಟಿ ನೀಡಿದ್ದು ಪ್ರಕರಣ ದಾಕಲಿಸಿಕೊಂಡು ಪರಿಶೀಲನೆ ನಡೆಸಿದ್ದಾರೆ.

## ಹೈನುಗಾರಿಕೆ, ಎರೆಹುಳು ಗೊಬ್ಬರ ತಯಾರಿಕೆ, ಕುರಿಸಾಕಾಣಿಕೆ ತರಬೇತಿಗೆ ಅರ್ಜಿ ಆಹ್ವಾನ

ಕೊಪ್ಪಳ: ಸ್ಟೇಟ್ ಬ್ಯಾಂಕ್ ಆಫ್ ಇಂಡಿಂ–ಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯಿಂದ ಕೊಪ್ಪಳ ಜಿಲ್ಲೆಯ ಗ್ರಾಮೀಣ ಭಾಗದ ಆಸಕ್ತರಿಗೆ 10 ದಿನಗಳ ಉಚಿತ ಹೈನುಗಾರಿಕೆ ಮತ್ತು ಎರೆಹುಳು ಗೊಬ್ಬರ ತಯಾರಿಕೆ ಹಾಗೂ ಕುರಿಸಾಕಾಣಿಕೆ ತರಬೇತಿಗಾಗಿ ತರಬೇತಿಯನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಅರ್ಜಿದಾರರು 18 ರಿಂದ 45 ವರ್ಷ ಒಳಗಿನವರಾಗಿರಬೇಕು. ಕನಿಷ್ಠ ಎಂಟನೇ ತರಗತಿ ಪಾಸ್ ಆಗಿರಬೇಕು. ಕೊಪ್ಪಳ ಜಿಲ್ಲೆಯ ಗ್ರಾಮೀಣಭಾಗದವರಾಗಿರಬೇಕು.

ಸ್ವಯಂ ಉದ್ಯೋಗದಲ್ಲಿ ಆಸಕ್ತಿ ಹೊಂದಿರಬೇಕು. ಅರ್ಜಿ ಸಲ್ಲಿಸಲಿಚ್ಛೀಸುವ ಆಸಕ್ತರು ತಮ್ಮ ಆಧಾರ ಕಾರ್ಡ ಜೆರಾಕ್ಸ್ ಪ್ರತಿ, ರೇಶನ್ ಕಾರ್ಡ ಜೆರಾಕ್ಸ್ ಪ್ರತಿ, ಪಾಸ್‌ಪೋರ್ಟ್ ಸೈಜ್ ಮೂರು ಫೋಟೋ, ಮಾರ್ಕ್ಸಕಾರ್ಡ ಜೆರಾಕ್ಸ್ ಪ್ರತಿಯೊಂದಿಗೆ ಅರ್ಜಿಯನ್ನು ನಿರ್ದೇಶಕರು, ಸ್ಟೇಟ ಬ್ಯಾಂಕ್ ಆಫ್ ಇಂಡಿಂ–ಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ, ಜಿಲ್ಲಾ ಕೈಗಾರಿಕಾ ಕೇಂದ್ರ ಆವರಣ, ಅಶೋಕ ಸರ್ಕಲ್ ಹತ್ತಿರ, ಕೊಪ್ಪಳ ದೂ.ಸಂ: 08539–231038, ಇಲ್ಲಿಗೆ ಸಲ್ಲಿಸಬೇಕು.


ಹೈನುಗಾರಿಕೆ ಮತ್ತು ಎರೆಹುಳು ಗೊಬ್ಬರ ತಯಾರಿಕೆ ಹಾಗೂ ಕುರಿಸಾಕಾಣಿಕೆ ತರಬೇತಿಗಾಗಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಊಟ ಮತ್ತು ವಸತಿಯನ್ನು ಉಚಿತವಾಗಿ ನೀಡಲಾಗುವುದು. ತರಬೇತಿಗಾಗಿ ಏಪ್ರಿಲ್ 26 ರಂದು ಸಂದರ್ಶನ ನಡೆಯಲಿದ್ದು, ಏ. 27ರಿಂದ ತರಬೇತಿ ಪ್ರಾರಂಭವಾಗಲಿವೆ ಎಂದು ಕೊಪ್ಪಳ ಎಸ್‌ಬಿಐ ಆರ್‌ಸಿಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ. ರಾಮಣ್ಣವರ ಅವರಿಗೆ ಬಸವ ಭೂಷಣ ಪ್ರಶಸ್ತಿ



ಬೈಲಹೊಂಗಲ : ಬಾಗಲಕೋಟೆ ಜಿಲ್ಲೆಯ ಲೋಕಾಪೂರದ ವೆಂಕಟಾಪೂರ ಓಣಿಯ ಸಮುದಾಯ ಭವನದಲ್ಲಿ ದಿ.23 ರಂದು ರಾತ್ರಿ 8–00 ಘಂಟೆಗೆ ಲೋಕಾಪೂರ ಬಸವ ಕೇಂದ್ರದ ಆಶ್ರಯದಲ್ಲಿ ವಿಶ್ವಗುರು ಬಸವಣ್ಣವರ ಜಯಂತಿ ನಿಮಿತ್ಯವಾಗಿ ನಡೆಯುವ ಪ್ರವಚನ ಕಾರ್ಯಕ್ರಮದಲ್ಲಿ ದೇಹದಾನ ಜಾಗೃತಿಗಾಗಿ ತಂದೆಯ ಮೃತ ದೇಹ ಛೇದಿಸಿ ವೈದ್ಯಕೀಯ ಇತಿಹಾಸ ಸೃಷ್ಟಿಸಿದ ಪಟ್ಟಣದ ಡಾ.ರಾಮಣ್ಣವರ ಚಾ–ರಿಟೇಬಲ್ ಟ್ರಸ್ಟ್‌ನ ಕಾರ್ಯದರ್ಶಿ ಹಾಗೂ ಬೆಳಗಾವಿ ಕೆಎಲ್‌ಇ ಶ್ರೀ ಬಿ.ಎಂ. ಕಂಕಣವಾಡಿ ಆಯುರ್ವೇದ ಮಹಾವಿದ್ಯಾಲಯದ ಶಾರೀರ ರಚನಾಶಾಸ್ತ್ರ ವಿಭಾಗದ ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರಾದ ಡಾ. ಮಹಾಂತೇಶ ರಾಮಣ್ಣವರ ಅವರ ವೈದ್ಯಕೀಯ ಸೇವೆಯನ್ನು ಪರಿಗಣಿಸಿ ಇವ–ರಿಗೆ ಬಸವ ಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು.

ಹಾರೂಗೇರಿ ಶರಣ ವಿಚಾರ ವಾಹಿನಿ ಅಧ್ಯಕ್ಷ ಆಯ್.ಆರ್.ಮಠಪತಿ ಸಾನಿಧ್ಯ ವಹಿಸುವರು. ಲೋಕಾಪೂರದ ಗಣಿ ಉದ್ಯಮಿದಾರ ಎಂ.ಎಂ.ವಿರಕ್ತಮಠ ಅಧ್ಯಕ್ಷತೆ ವಹಿಸುವರೆಂದು ಕಾರ್ಯಕ್ರಮ ಆಯೋಜಕರು ಪ್ರಕಟನೆಯಲ್ಲಿ ತಿಳಿಸಿದ್ದಾರೆ. ಡಾ. ಮಹಾಂತೇಶ ರಾಮಣ್ಣವರ ಅವರಿಗೆ ಪ್ರಶಸ್ತಿ ಲಭಿಸಿರುವದಕ್ಕೆ ಕಾಲೇಜಿನ ಪ್ರಾಚಾರ್ಯರು, ಶಿಕ್ಷಕರು, ವೈದ್ಯ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.



ಬೈಲಹೊಂಗಲ: ತಾಲೂಕಿನ ಸುಕ್ಷೇತ್ರ ದೇವಲಾಪೂರ ಗ್ರಾಮದ ಶ್ರೀ ಉಡಚಮ್ಮಾದೇವಿ ಜಾತ್ರಾ ಮಹೋತ್ಸವದ ಅಂಗವಾಗಿ ಮಂಗಳವಾರ ಶ್ರೀದೇವಿಯ ರಥೋತ್ಸವವು ಸಾವಿರಾರು ಭಕ್ತರ ಮಧ್ಯ ಅದ್ದೂರಿಯಾಗಿ ಜರುಗಿತು.

# ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಬಂಡೆಪ್ಪ ಖಾಶೆಂಪುರ್ ನಾಮಪತ್ರ ಸಲ್ಲಿಕೆ

ಬೀದರ್: ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಜೆಡಿ–ಎಸ್ ಅಭ್ಯರ್ಥಿಯಾಗಿ ಬೃಹತ್ ಸಂಖ್ಯೆಯ ಅಭಿಮಾನಿಗಳು, ಮುಖಂಡರು, ಕಾರ್ಯಕರ್ತರ ಬೆಂಬಲದೊಂದಿಗೆ ಮಾಜಿ ಸಚಿವರು, ಜೆಡಿಎಸ್ ಶಾಸಕಾಂಗ ಪಕ್ಷದ ಉಪನಾಯಕರು, ಜೆಡಿ–ಎಸ್ ಕೋರ್ ಕಮಿಟಿಯ ಅಧ್ಯಕ್ಷರು, ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಮಂಗಳವಾರ 2023ರ ಸಾರ್ವತ್ರಿಕ ವಿಧಾನಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸಿದರು.

ನಾಮಪತ್ರ ಸಲ್ಲಿಕೆಗೂ ಮುನ್ನ ಅವರು ಬೀದರ್ ದಕ್ಷಿಣ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಮ–ರಿಗೆಮ್ಮಾ ದೇವಿ ಮಂದಿರ, ಭಾಲ್ಕಿ ತಾಲೂಕಿನ ಖಾನಾಪೂರದ ಶ್ರೀಕ್ಷೇತ್ರ ಮೈಲಾರ ಮಲ್ಲಣ್ಣ (ಖಂಡೋಬಾ) ದೇವಸ್ಥಾನ, ಶ್ರೀ ಘೃತಮಾರಿ (ಗುರುತ ಮಲ್ಲಮ್ಮ) ದೇವಿಯ ದೇವಸ್ಥಾನ, ತೆಲಂಗಾಣ ರಾಜ್ಯದ ರೆಜಿಂತಲ್ ನ ಶ್ರೀ ಸಿದ್ಧಿ ವಿನಾಯಕ ದೇವಸ್ಥಾನ, ಬೀದರ್ ನ ಸನಾತನ ಹನುಮಾನ್ ಮಂದಿರ, ಭವಾನಿ ಮಂದಿರ, ನಗರದ ಮಂಗಳಪೇಟ್ ನ ಶ್ರೀ ಭವಾನಿ ಮಾತೆಯ ದೇವಸ್ಥಾನ ಸೇರಿದಂತೆ ವಿವಿಧ ದೇವಸ್ಥಾನಗಳಿಗೆ ಕುಟುಂಬ ಸಮೇತವಾಗಿ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.



ಬೀದರ್ ನಗರದ ಶಾಸಕರ ನಿವಾಸದಿಂದ ಪಾದಯಾತ್ರೆ ಆರಂಭ: ಬಂಡೆಪ್ಪ ಖಾಶೆಂಪುರ್ ರವರು ಮಂಗಳವಾರ ಬೆಳಗ್ಗೆ ಬೀದರ್ ನಗರದ ಓಲ್ಡ್ ಸಿಟಿ (ಹಳೆ ಸರ್ಕಾರಿ ಆಸ್ಪತ್ರೆ ಹತ್ತಿರ) ಯಲ್ಲಿರುವ ತಮ್ಮ ನಿವಾಸದಿಂದ ಪಾದಯಾತ್ರೆ ಆರಂಭಿಸಿದರು. ಪಕ್ಷದ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು, ಬೆಂಬಲಿಗರು ಬೃಹತ್ ಸಂಖ್ಯೆಯಲ್ಲಿ ಸೇರಿ ಶಾಸಕರೊಂದಿಗೆ ಹೆಜ್ಜೆ ಹಾಕಿದರು. ಇದೇ ವೇಳೆ ಓಲ್ಡ್ ಸಿಟಿಯ ರಾಮಮಂದಿರ, ಭವಾನಿ ಮಂದಿರಗಳಿಗೆ ತೆರಳಿ ದರ್ಶನ ಪಡೆದು, ದರಗಹ ಮುಲಾನಿ ಬಾದ ಷಾ (ಓಲ್ಡ್ ಸಿಟಿಯ ದರ್ಗಾ) ಗೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದರು.

ಡೊಳ್ಳು, ಹಲಗೆ, ಬಾಜಾ – ಭಜಂತ್ರಿಗಳೊಂದಿಗೆ ಹೆಜ್ಜೆ: ಬಂಡೆಪ್ಪ ಖಾಶೆಂಪುರ್ ರವರ ನಾಮಪತ್ರ ಸಲ್ಲಿಕೆಯ ಪಾದಯಾತ್ರೆಯೊಂದಿಗೆ ಡೊಳ್ಳು, ಹಲಗೆ, ಬಾಜಾ – ಭಜಂತ್ರಿ ಸೇ–ರಿದಂತೆ ಮುಂತಾದ ವಾದ್ಯ ಮೇಳಗಳು ರಸ್ತೆಯೊದ್ದಕ್ಕೂ ಸದ್ದು ಮಾಡಿದವು. ಬೃಹತ್ ಸಂಖ್ಯೆಯಲ್ಲಿ ಸೇರಿದ್ದ ಶಾಸಕರ ಅಭಿಮಾನಿಗಳು, ಜೆಡಿಎಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಸಿಳ್ಳೆ, ಕೇಕೆಗಳೊಂದಿಗೆ ಸಾಗಿದರು.

ನಗರದ ಓಲ್ಡ್ ಸಿಟಿ, ಅಂಬೇಡ್ಕರ್ ಸರ್ಕಲ್, ಭಗತ್ ಸಿಂಗ್ ಸರ್ಕಲ್ ಸೇರಿದಂತೆ ವಿವಿಧ ವೃತ್ತಗಳೊಂದಿಗೆ ಸಾಗಿಬಂದ ನಾಮಪತ್ರ ಸಲ್ಲಿಕೆಯ ಯಾತ್ರೆ ತಹಶಿಲ್ದಾರರ ಕಛೇರಿಗೆ ತಲುಪಿತು.

ಚುನಾವಣಾಧಿಕಾರಿಗೆ ನಾಮಪತ್ರ ಒಪ್ಪಿಸಿದ ಬಂಡೆಪ್ಪ ಖಾಶೆಂಪುರ್: ಸಡಗರ, ಸಂಭ್ರಮ, ಹರ್ಷೋದ್ಗಾರ ಗಳೊಂದಿಗೆ ಅದ್ದೂರಿ ಪಾದಯಾತ್ರೆ ನಡೆಸಿದ ಶಾಸಕ ಬಂಡೆಪ್ಪ ಖಾಶೆಂಪುರ್ ರವರು ನಗರದ ತಹಶಿಲ್ದಾರರ ಕಛೇರಿಗೆ ಭೇಟಿ ನೀಡಿ ಅಲ್ಲಿದ್ದ ಚುನಾವಣಾಧಿಕಾರಿಗಳಿಗೆ ನಾಮಪತ್ರ ಒಪ್ಪಿಸಿದರು. ನಾಮಪತ್ರ ಸಲ್ಲಿಕೆಯ ವೇಳೆ ಶಾಸಕರೊಂದಿಗೆ ಬೀದರ್ ಉತ್ತರ ವಿಧಾನಸಭಾ ಕ್ಷೇತ್ರದ ಜೆಡಿ–ಎಸ್ ಅಭ್ಯರ್ಥಿ ಸೂರ್ಯಕಾಂತ್ ನಾಗಮಾರಪಳ್ಳಿ, ಪ್ರಮುಖರಾದ ರಾಜು ಕಡ್ಯಾಳ, ಕಿರಣ್ ಚಂದಾ ಇದ್ದರು.

# ದೀಪ ಬೆಳಗೋಣ ಮತದಾನ ಮಾಡೋಣ: ಎಸ್ ಎಸ್ ಸಂಪಗಾಂವಿ ಕರೆ

ಬೆಳಗಾವಿ: ತಾಲೂಕಾ ಸ್ವೀಪ್ ಸಮಿತಿ ಬೈಲಹೊಂಗಲ, ತಾಲೂಕಾ ಆಡಳಿತ ಮತ್ತು ಪುರಸಭೆ ಹಾಗೂ ಎಲ್ಲಾ ಇಲಾಖೆಯ ಸಹಯೋಗದೊಂದಿಗೆ ಬೈಲಹೊಂಗಲ ಪಟ್ಟಣದಲ್ಲಿ ಏ.17 2023 ರಂದು ವಿಧಾನ ಸಭಾ ಚುನಾವಣೆ 2023 ರ ಪ್ರಯುಕ್ತವಾಗಿ ವಿಶೇಷವಾದ ಮತದಾನ ಜಾಗೃತಿ ಮಾಡಲಾಯಿತು.



ದೀಪ ಬೆಳಗುವ ಮೂಲಕ (ಕ್ಯಾಂಡಲ್ ಜಾಥಾ) ಹಮ್ಮಿಕೊಂಡು ನಗರದ ಚನ್ನಮ್ಮ ಸಮಾಧಿಯಿಂದ ಕೇಂದ್ರ ಬಸ್ ನಿಲ್ದಾಣ ದವರೆಗೆ ಕ್ಯಾಂಡಲಗಳನ್ನು ಹಚ್ಚಿ ಕೊಂಡು ಚುನಾವಣೆಯ ಘೋಷವಾಕ್ಯ ಮತ್ತು ಘೋಷನಾ ಫಲಕಗಳನ್ನು ಹಿಡಿದು ಕೊಂಡು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಎಸ್ ಎಸ್ ಸಂಪಗಾಂವಿ ತಾಲೂಕಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯ ನಿರ್ವಾಹಕ ಅಧಿಕಾರಿಗಳು ದೀಪ ಬೆಳಗುವ ಮೂಲಕ ಚಾಲನೆ ನೀಡಿದರು.

ತಹಶೀಲ್ದಾರರಾದ ಸುರೇಶ ಮಾಳಗೇರಿ, ಪುರಸಭೆ ಮುಖ್ಯಾಧಿಕಾ–ರಿಗಳಾದ ವಿರೇಶ ಹಸಬಿ, ಸಹಾಯಕ ನಿರ್ದೇಶಕರಾದ (ಸಮಾಜ ಕಲ್ಯಾಣ) ಎಸ್ ಎ ಯಮನೂರ , ಶಿಶು ಅಭಿವೃದ್ಧಿ ಯೋಜನಾಧಿಕಾರಿ ಆರ್ ಎಮ್ ಬಸರಗಿ ತಾಪಂ ವ್ಯವಸ್ಥಾಪಕರಾದ ಎಮ್ ಎ ಇಂಚಲಮಠ, ಎಸ್ ಬಿ ಸಂಗನಗೌಡರ, ಎಸ್ ವ್ಹಿ ಹಿರೇಮಠ, ಬಿ ಕೆ ಹರಿ–ಜನ ಹಾಗೂ ತಾಲೂಕಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಪುರಸಭೆಯ ಕಾರ್ಮಿಕರು ಉಪಸ್ಥಿತ–ರಿದ್ದರು.

## ಕಾಂಗ್ರೇಸ್ ಪಕ್ಷದಿಂದ ವಿವಿಧೆಡೆ ಮತಯಾಚನೆ



ಬೈಲಹೊಂಗಲ: ಬೈಲಹೊಂಗಲ ಮತಕ್ಷೇತ್ರದ ಕಾಂಗ್ರೇಸ್ ಪಕ್ಷದ ಅಧಿಕೃತ ಅಭ್ಯರ್ಥಿ ಮಹಾಂತೇಶ ಕೌಜಲಗಿ ಪರ ಅವರ ಪತ್ನಿ ಗಿರೀಜಾ ಕೌಜಲಗಿ ಮಂಗಳವಾರ ಪಟ್ಟಣದ ವಿವಿಧೆಡೆ ಮತಯಾಚಿಸಿದರು.

ಪಟ್ಟಣದ ಗಣ್ಯರಾದ ಗಂಗಪ್ಪಣ್ಣ ಬೋಳಣ್ಣವರ, ನೀಲಮ್ಮಾ ಬೋಳಣ್ಣವರ, ಚಿತ್ರನಟ ಶಿವರಂಜನ ಬೋಳಣ್ಣವರ, ಹಿರಿಯ ಧುರೀಣೆ ಪುಷ್ಪಾ ದೇಶನೂರ, ಸುರೇಖಾ ಕೌಜಲಗಿ, ಯವ ಧುರೀಣ ಕುಮಾರ ದೇಶನೂರ, ಪುರಸಭೆ ಮಾಜಿ ಅಧ್ಯಕ್ಷೆ ಶಾಂತಾದೇವಿ ಹಿರೇಮಠ, ಪುರಸಭೆ ಉಪಾಧ್ಯಕ್ಷೆ ಲಕ್ಷ್ಮೀ ಬಡ್ಲಿ, ಪುರಸಭೆ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷೆ ಮಮತಾಜ ಗಗ್ಗರಿ, ಜಯಶ್ರೀ ಜೊಂಜಾಳೆ, ವಿಜಯಾ ಕಳ್ಳಬಡ್ಡಿ, ವಿದ್ಯಾ ಪಾಟೀಲ, ಉಳವಪ್ಪ ಬಡ್ಡಿಮನಿ, ಮಂಜುಳಾ ಸೋಗಲದ ಇನ್ನೂ ಅನೇಕ ಕಾರ್ಯಕರ್ತರು ಈ ಸಂದರ್ಭದಲ್ಲಿ ಹಾಜರಿದ್ದರು.

# ಬಿಜೆಪಿ ಪಕ್ಷದ ಅಧಿಕೃತ ಅಭ್ಯರ್ಥಿ ಜಗದೀಶ ಚನ್ನಪ್ಪ ಮೆಟಗುಡ್ಡ ನಾಮಪತ್ರ ಸಲ್ಲಿಕೆ

ಬೈಲಹೊಂಗಲ: ಬೈಲಹೊಂಗಲ ಮತಕ್ಷೇತ್ರದ ಬಿಜೆಪಿ ಪಕ್ಷದ ಅಧಿಕೃತ ಅಭ್ಯರ್ಥಿ ಜಗದೀಶ ಚನ್ನಪ್ಪ ಮೆಟಗುಡ್ಡ ಅವರು ತಮ್ಮ ಅಪಾರ ಬಿಜೆಪಿ ಕಾರ್ಯಕರ್ತರು, ಅಭಿಮಾನಿಗಳೊಂದಿಗೆ ಬ್ರಹತ್ತ ಮೆರವಣಿಗೆ ಮೂಲಕ ಜೋಡೆತ್ತುಗಳ ಚಕ್ಕಡಿಯಲ್ಲಿ ತೆರಳಿ ಮಂಗಳವಾರ ಚುನಾವಣಾಧಿಕಾರಿಗೆ ನಾಮಪತ್ರ ಸಲ್ಲಿಸಿದರು.

ನಾಡಿನ ಆರಾಧ್ಯ ದೈವ ಪಟ್ಟಣದ ಶ್ರೀ ಮರಡಿಬಸವೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಮೆರವಣಿಗೆ ಚಾಲನೆ ನೀಡಲಾಯಿತು. ವಾಂಜಾನಯಿಂದಲ್ ದೇವಸ್ಥಾನದ ಆವರಣದಲ್ಲಿ ಸಹಸ್ರಾರು ಕಾರ್ಯಕರ್ತರು ಜಮಾವಣೆಗೊಂಡರು. ಎಲ್ಲಿ ನೋಡಿದಲ್ಲಿ ಬಿಜೆಪಿ ಬಾವುಟಗಳು, ಟೋಪಿ, ರುಮಾಲು ರಾರಾಜಿಸಿದವು.

ನರೇಂದ್ರ ಮೋದಿಜೀ, ಯಡಿಯೂರಪ್ಪ ಹಾಗೂ ಉತ್ತರ ಕರ್ನಾಟಕದ ಎತ್ತರದ ಹುಲಿ ಜಗದೀಶ ಮೆಟಗುಡ್ಡ, ವಿಜಯ ಮೆಟಗುಡ್ಡ ಪರವಾಗಿ ಜಯಘೋಷಗಳು ಮುಗಿಲು ಮುಟ್ಟಿದವು. ಡೊಳ್ಳು ಮೇಳ, ಝಾಂಜ ಪದಕ, ವಿವಿಧ ವಾದ್ಯಮೇಳಗಳು ಮೆರವಣಿಗೆಗೆ ಕಳೆ ತಂದವು. ಲಂಬಾಣಿ ಮಹಿಳೆಯರ ಲಂಬಾಣಿ ಕುಣಿತ ವಿಶೇಷ ಗಮನ ಸೆಳೆಯಿತು. ಅಭಿಮಾನಿಗಳು ಕುಣಿದು ಕುಪ್ಪಳಿಸಿದರು. ಮೆರವಣಿಗೆ



ಹೂವಿನ ಹೊಳೆ ಹರಿಸಿದರು. ಬಿರು ಬಿಸಿಲಿನಲ್ಲೂ ಸುಮಾರು 20 ಸಾವಿರಕ್ಕಿಂತ ಹೆಚ್ಚು ಕಾರ್ಯಕರ್ತರು ಬಾಗಿಯಾಗಿದ್ದರು. ನೀರಿನ, ಮಜ್ಜಿಗೆ ವ್ಯವಸ್ಥೆ ಮಾಡಲಾಗಿತ್ತು.

ನಂತರ ಪತ್ರಿಕೆಯೊಂದಿಗೆ ಮಾತನಾಡಿದ ಜಗದೀಶ ಮೆಟಗುಡ್ಡ ನನ್ನ ಅಧಿಕಾರ ಅವಧಿಯಲ್ಲಿನ ಜನಪರ ಕಾಮಗಾರಿಗಳು, ನನ್ನ ಪಕ್ಷ ಸಂಘಟಣೆ ಗುರುತಿಸಿ ನನಗೆ ವ–ರೀಷ್ಠರು ಟಿಕೇಟ್ ನೀಡಿದ್ದು, ಎಲ್ಲ ಬಿಜೆಪಿ ಕಾರ್ಯಕರ್ತರು ಪಕ್ಷಕ್ಕೆ ನಿಷ್ಠೆಯಿಂದ ದುಡಿದು ನನ್ನನ್ನು ಗೆಲ್ಲಿಸಿ ನರೇಂದ್ರ ಮೋದಿ ಅವರ ಕೈ ಬಲಪಡಿಸಬೇಕೆಂದು ಮನವಿ ಮಾಡಿದರಲ್ಲದೆ, ನನ್ನ ಹಾಗೂ ಪಕ್ಷದ ಮೇಲಿನ ಅಭಿಮಾನದಿಂದ ಸಹಸ್ರಾರು ಸಂಖ್ಯೆಯಲ್ಲಿ ಸೇರಿದ ಜನತೆಗೆ ಕೃತಜ್ಞತೆ ಸಲ್ಲಿಸಿದರು.

ಸಂಸದೆ ಮಂಗಲಾ ಅಂಗಡಿ, ಅರ್ಬನ್ ಬ್ಯಾಂಕ್ ಅಧ್ಯಕ್ಷ ಡಾ.ಬಿ.ಎಚ್. ಮೆಟಗುಡ್ಡ, ಎಸ್.ಎಫ್. ಹರಕುಣಿ, ನ್ಯಾಯವಾದಿಗಳಾದ ರವಿ ಮೆಟಗುಡ್, ಆನಂದ ನರಸಣ್ಣವರ, ಶಿವಬಸಪ್ಪ ತುರಮರಿ, ಪ್ರೋ.ಸಿ.ವ್ಹಿ. ಜ್ಯೋತಿ, ಗುರುಪಾದ ಕಳ್ಳಿ, ರತ್ನಾ ಗೋದಿ, ಎಫ್.ಎಸ್. ಸಿದ್ದನಗೌಡರ, ಯುವ ಮುಖಂಡ ವಿಜಯ ಮೆಟಗುಡ್ಡ, ಗುರು ಮೆಟಗುಡ್ಡ, ಶಿವಾನಂದ ಬಡ್ಡಿಮನಿ, ಪ್ರಮೂಲ ಪಾಟೀಲ, ಎಸ್.ಜಿ. ಬೂದಯ್ಯನವರಮಠ, ಸುಭಾಷ ತುರಮರಿ, ವಾಸನಗೌಡ ಪಾಟೀಲ, ಸುನೀಲ ಮರಕುಂಬಿ, ಡಾ.ರಾಜು ಬಡ್ಲಿ, ಸಂತೋಷ ರಾಯರ, ಅನೀಲ ಮೆಟಗುಡ್ಡ, ಮಹಾಂತೇಶ ಮೆಟಗುಡ್ಡ, ಜಗದೀಶ ಬೂದಿಹಾಳ, ಮೋಹನ ವಕ್ಕುಂದ, ಬಸವರಾಜ ಬಂಡಿವಡ್ಡರ, ಸುರೇಶ ಮ್ಯಾಕಲ್, ಸಂತೋಷ ಹಡಪದ ಹಾಗೂ ಬಿಜೆಪಿ ಪದಾಧಿಕಾರಿಗಳು, ಜನಪ್ರತಿನಿಧಿಗಳು, ಸಹಸ್ರಾರು ಬಿಜೆಪಿ ಕಾರ್ಯಕರ್ತರು, ಮೆಟಗುಡ್ಡ ಅಭಿಮಾನಿಗಳು ಇದ್ದರು.

## ಅವ್ಯವಹಾರ ಆರೋಪ: ದೇವರಾಜ ಅರಸು ಟರ್ಮಿನಲ್ ಕಚೇರಿ ಮೇಲೆ ಲೋಕಾಯುಕ್ತ ದಾಳಿ




ಬೆಂಗಳೂರು: 55 ಕೋಟಿ ರೂ ಅವ್ಯವಹಾರ ಆರೋಪದ ಮೇರೆಗೆ ದೇವರಾಜ ಅರಸು ಟರ್ಮಿನಲ್ ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ಮಂಗಳವಾರ ದಾಳಿ ನಡೆಸಿದ್ದಾರೆ.

ಮೂಲಗಳ ಪ್ರಕಾರ ಕಾಮಗಾರಿಯನ್ನೇ ನಡೆಸದೆ ಬರೊಬ್ಬರಿ 55 ಕೋಟಿ ರೂ ಬಿಲ್ ಪಾವತಿಸಿರುವ ಆರೋಪಕ್ಕೆ ಸಂಬಂಧಿಸಿದಂತೆ ಡಿ. ದೇವರಾಜ ಅರಸು ಟ್ರಕ್ ಟರ್ಮಿನಲ್ ಮೇಲೆ ದಾಳಿ ನಡೆಸಿರುವ ಲೋಕಾಯುಕ್ತ ಪೊಲೀಸರು, ತೀವ್ರ ಶೋಧ ನಡೆಸುತ್ತಿದ್ದಾರೆ. ಶಾಂತಿನಗರದ ಬಿಎಂಟಿಸಿ ಕಟ್ಟಡದಲ್ಲಿರುವ ಸಂಸ್ಥೆಯ ಕೇಂದ್ರ ಕಚೇರಿ ಮೇಲೆ ದಾಳಿ ಮಾಡಿದ್ದು, ದಾಖಲೆಗಳನ್ನು ವಶಪಡಿಸಿಕೊಳ್ಳುತ್ತಿದ್ದಾರೆ ಎಂದು ತಿಳಿದುಬಂದಿದೆ.

ಕಾಮಗಾರಿಯೊಂದಕ್ಕೆ ಮಂಜೂರಾಗಿದ್ದ 55 ಕೋಟಿ ರೂ ಅನ್ನು ಸಂಸ್ಥೆಯ ಅಧ್ಯಕ್ಷ ಡಿ.ಎಸ್. ವೀರಯ್ಯ ಮತ್ತು ಹಿಂದಿನ ವ್ಯವಸ್ಥಾಪಕ ನಿರ್ದೇಶಕ ಶಂಕರಪ್ಪ ಅಕ್ರಮವಾಗಿ ವರ್ಗಾವಣೆ ಮಾಡಲು ಪ್ರಯತ್ನಿಸುತ್ತಿರುವ ಕುರಿತು ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಕೆಯಾಗಿತ್ತು. ಈ ಕುರಿತು ಲೋಕಾಯುಕ್ತದ ಬೆಂಗಳೂರು ನಗರ ಪೊಲೀಸ್ ಘಟಕದ ಅಧಿಕಾ–ರಿಗಳು ಪ್ರಾಥಮಿಕ ತನಿಖೆ ನಡೆಸಿದ್ದರು. ಆರೋಪದಲ್ಲಿ ಮೇಲ್ನೋಟಕ್ಕೆ ಸತ್ಯಾಂಶವಿರುವುದು ಕಂಡುಬಂದಿರುವ ಹಿನ್ನಲೆಯಲ್ಲಿ ಈ ದಾಳಿ ನಡೆಸಲಾಗಿದೆ ಎಂದು ತಿಳಿದುಬಂದಿದೆ.

ಲೋಕಾಯುಕ್ತದ ಬೆಂಗಳೂರು ನಗರ ಎಸ್ ಪಿ ಕೆ.ವಿ. ಅಶೋಕ್ ಕಾರ್ಯಾಚರಣೆಯ ನೇತೃತ್ವ ವಹಿಸಿದ್ದಾರೆ.

# ಅಕ್ರಮ ಮರಳುಗಾರಿಕೆಯನ್ನು ತಡೆಯಲು ಬಂದ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಿ, ಕಲ್ಲುತೂರಾಟ

ಪಾಟ್ನಾ: ಅಕ್ರಮ ಮರಳುಗಾ–ರಿಕೆಯನ್ನು ಪರಿಶೀಲಿಸಲು ಬಂದ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಿ, ಕಲ್ಲು ತೂರಾಟ ನಡೆಸಿರುವ ಘಟನೆ ಪಾಟ್ನಾದ ಮನೇರ್ ಪ್ರದೇಶದಲ್ಲಿ ನಡೆದಿದೆ.

ಅಮಿಯಾ ಕುಮಾರಿ, ಫರ್ಹೀನ್ ,ಶೋಧ ಕಾರ್ಯಾಚರಣೆಯ ನೇತೃತ್ವ ವಹಿಸಿದ್ದ ಜಿಲ್ಲಾ ಗಣಿ ಅಧಿಕಾರಿ ಗೌರವ್ ಕುಮಾರ್ ಅವರ ಮೇಲೆ ಹಲ್ಲೆ ನಡೆದಿದ್ದು, ಗಾಯಗೊಂಡಿರುವ ಅವರನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ ಎಂದು ವರದಿಯಿಂದ ತಿಳಿದುಬಂದಿದೆ.



ಮನೇರ್ ನಲ್ಲಿರುವ ಕೊಯಿಲ್‌ವಾರ್ ಸೇತುವೆಯ ಬಳಿ ಅಕ್ರಮ ಮರಳುಗಾರಿಕೆ ದಂಧೆ ನಡೆಯುತ್ತಿದೆ ಎನ್ನುವ ದೂರುಗಳು ಕೇಳಿ ಬಂದ ಹಿನ್ನೆಲೆ ಗಣಿಗಾರಿಕೆ ಇಲಾಖೆಯ ಅಧಿಕಾ–ರಿಗಳ ತಂಡ ಪಾಟ್ನಾದಿಂದ ಪರಿಶೀಲಿಸಲು ತೆರಳಿದೆ.

ಈ ವೇಳೆ ಇಬ್ಬರು ಮಹಿಳಾ ಅಧಿಕಾರಿ ಸೇರಿ ಒಟ್ಟು ಮೂವರು ಅಧಿಕಾರಿಗಳಿಗೆ ಅಲ್ಲಿದ್ದ ಜನರು ಬೆದರಿಕೆ ಹಾಕಿದ್ದಾರೆ. ಅಲ್ಲದೇ ಅವರೊಂದಿಗೆ ವಾಗ್ವಾದ ನಡೆಸಿ ಹಲ್ಲೆ ನಡೆಸಿದ್ದಾರೆ.

ಮೊದಲು ಕಲ್ಲು ತೂರಾಟ ನಡೆಸಿ, ಒಬ್ಬ ಮಹಿಳಾ ಅಧಿಕಾ–ರಿಯನ್ನು ಕೆಳಕ್ಕೆ ಹಾಕಿ ಕೂದಲು ಹಿಡಿದು ಎಳೆದುಕೊಂಡು ಹೋಗಿದ್ದಾರೆ. ಅಧಿಕಾರಿಗಳು ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಯತ್ನಿಸಿದ್ದರೂ ಅಲ್ಲಿದ್ದ ಗುಂಪು ಅಧಿಕಾರಿಗಳನ್ನು ಕಲ್ಲು, ಕೋಲಿನಿಂದ ಹಲ್ಲೆ ನಡೆಸಿ ಬಳಿಕ ಅಟ್ಟಾಡಿಸಿಕೊಂಡು ಹೊಡೆದಿದೆ.

ಘಟನೆ ಬಗ್ಗೆ ಮಾಹಿತಿ ಪಡೆದ ಪೊಲೀಸರು, 44 ಜನರ ವಿರುದ್ಧ ಕೇಸ್ ದಾಖಲಿಸಿ, 50 ವಾಹನಗಳನ್ನು ಜಪ್ತಿ ಮಾಡಲಾಗಿದೆ ಎಂದು ವರದಿಯಾಗಿದೆ.

# ಸುಕೋ ಬ್ಯಾಂಕಿನಿಂದ ಮತದಾರರ ಜಾಗೃತಿ ಜಾಥಾ




ಬಳ್ಳಾರಿ: ಮತದಾನವು ಮೂಲಭೂತ ಹಕ್ಕುಗಳಲ್ಲಿ ಒಂದಾಗಿದ್ದು ಎಲ್ಲರೂ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಯಶಸ್ವಿಗೊಳಿಸಬೇಕು ಎಂದು ಸುಕೋ ಬ್ಯಾಂಕನ ಆಡಳಿತ ಮಂಡಳಿ ಕಾರ್ಯದರ್ಶಿಯಾದ ವೆಂಕಟೇಶ್‌ರಾವ್ ಅವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ವಿಧಾನಸಭೆಯ ಸಾರ್ವತ್ರಿಕಚುನಾವಣೆಯು ಮೇ 10 ರಂದು ನಡೆಯಲಿರುವ ಹಿನ್ನೆಲೆಯಲ್ಲಿ ಸುಕೋ ಬ್ಯಾಂಕಿನ ಸಿಬ್ಬಂದಿಗಳು ಮಂಗಳವಾರ ದಿನಾಂಕ 18–04–2023ರಂದು ಬಳ್ಳಾ–ರಿಯಲ್ಲಿ ಹಮ್ಮಿಕೊಂಡಿದ್ದ ಮತದಾರರ ಜಾಗೃತಿ ಜಾಥಾ ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಜಾಪ್ರಭುತ್ವದಲ್ಲಿ ಮತದಾರರುತಪ್ಪದೆ ಮತದಾನ ಮಾಡುವುದು ಮಹತ್ತರವಾದದ್ದು. ಮತದಾನದ ಮೂಲಕ ಪ್ರತಿಯೊಬ್ಬರೂ ಸಂವಿಧಾನಬದ್ಧ ಹಕ್ಕನ್ನುಚಲಾವಣೆ ಮಾಡಿ ತಮ್ಮ ಜನನಾಯಕರನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದರು.

ಸುಕೋ ಬ್ಯಾಂಕಿನ ಮುಖ್ಯಕಚೇ–ರಿಯಿಂದ ಆರಂಭವಾದಜಾಥ–ವು ಪಟೇಲ್ ನಗರರಸ್ತೆಯ ಮೂಲಕ ಗಡಿಗಿಚನ್ನಪ್ಪ ವೃತ್ತದಲ್ಲಿ ಸಮಾರೋಪಗೊಂಡಿತು.

ಬಳ್ಳಾರಿಯ ಮುಖ್ಯಕಚೇರಿಯ ಸಿಬ್ಬಂದಿಗಳು, ಮುಖ್ಯ ಶಾಖೆ, ರಾಯಲ್ ಸರ್ಕಲ್ ಶಾಖೆ ಹಾಗೂ ಪಟೇಲ್ ನಗರ ಶಾಖೆಯಎಲ್ಲ ಸಿಬ್ಬಂದಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು. ಸುಕೋ ಬ್ಯಾಂಕಿನ ನಿರ್ದೇಶಕಿ ಶ್ರೀಮತಿ ಸಾವಿತ್ರಿ ಡಿ ಅವರು ಅತಿಥಿಗಳಾಗಿ ಮಾತನಾಡಿ ನಿಮ್ಮ ಮತವು ನಿಮ್ಮಧ್ವನಿ ಹಾಗೂ ನಿಮ್ಮ ಹಕ್ಕಾಗಿದ್ದುತಪ್ಪದೆ ಮತಚಲಾವಣೆ ಮಾಡಿರಿಎಂದರು.

ಸುಕೋ ಬ್ಯಾಂಕ್ ನ ಜನರಲ್ ಮ್ಯಾನೇಜರ್ ಡಿ.ಎಫ್.ಸಣ್ಣಕ್ಕಿ, ಜಾಥಾದ ಸಂಯೋಜಕಿ ದೀಪಾ ಪಾಟೀಲ್‌ಅವರು ಪ್ರಜಾ ಪ್ರಭುತ್ವದಯಶಸ್ಸು ಮತದಾನದಲ್ಲಿದೆ. ಕಾರಣ ಪ್ರತಿಯೊಬ್ಬರೂ ಮತದಾನ ಮಾಡಬೇಕು ಎಂದರು.ಬ್ಯಾಂಕಿನ ಅಧ್ಯಕ್ಷರಾದ ಮೋಹಿತ್ ಮಸ್ಕಿ, ಚೀಫ್ ಆಪರೇಟಿಂಗ್ ಆಫೀಸರ್ ಈಶ್ವರನ್ ಟಿ.ಎನ್ ಅವರೂ ಜಾಥಾದಲ್ಲಿ ಭಾಗವಹಿಸಿದ್ದರು.

## ಬಳ್ಳಾರಿ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಮಾಧ್ಯಮ, ಮತ್ತು ಕಾಲ್ ಸೆಂಟರನ್ನು ಉದ್ಘಾಟಿಸಿದ ಲಕ್ಷ್ಮಣ

ಬಳ್ಳಾರಿ: ಬಳ್ಳಾರಿ ನಗರದ ಸಂಗನಕಲ್ ರಸ್ತೆಯಲ್ಲಿರುವ ವಾಜಪೇಯಿ ಲೇಔಟ್ ನಲ್ಲಿರುವ ಬಿಜೆಪಿಯ ಜಿಲ್ಲಾ ಕಾರ್ಯಾಲಯ ದಲ್ಲಿ ದಿನಾಂಕ 18.4.2023 ರಂದು ಮಂಗಳವಾರ ಬೆಳಿಗ್ಗೆ 10.00 ಗಂಟೆಗೆ ಜಿಲ್ಲಾ ಚುನಾವಣಾ ಕಾರ್ಯಾಲಯ, ಮಾಧ್ಯಮ, ಮತ್ತು ಕಾಲ್ ಸೆಂಟ–ರ್‌ನ್ನು ಲಕ್ಷ್ಮಣ ಜಿ ರಾಷ್ಟ್ರೀಯ ಹಿಂದುಳಿದ ವರ್ಗಗಳ ಮೋರ್ಚಾದ ಅಧ್ಯಕ್ಷರು, ರಾಜ್ಯ ಸಭಾ ಸದಸ್ಯರು ಮತ್ತು ಬಳ್ಳಾರಿ ಜಿಲ್ಲಾ ವಿಧಾನ ಸಭಾ ಚುನಾವಣೆ ಜಿಲ್ಲಾ ಪ್ರವಾಸಿ ಉಸ್ತುವಾರಿಗಳು ಉದ್ಘಾಟನೆ ಮಾಡಿದರು.



ಈ ಸಂದರ್ಭದಲ್ಲಿ ವೈ ಎಂ ಸತೀಶ್ ರವರು ವಿಧಾನ ಪರಿಷತ್ ಸದಸ್ಯರು ಹಾಗೂ ಮುರಾಹರ ಗೌಡ್ರು ಬಿಜೆಪಿ ಬಳ್ಳಾರಿ ಜಿಲ್ಲಾಧ್ಯಕ್ಷರು. ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಅಶೋಕ್ ರವರು ಹಾಗೂ ಅನಿಲ್ ರವರು. ಜಿಲ್ಲಾ ಉಪಾಧ್ಯಕ್ಷರಾದ ಗಾಳಿ ಶಂಕ್ರಪ್ಪನವರು.ಜಿಲ್ಲಾ ಕಾರ್ಯಾಲಯ ಕಾರ್ಯದರ್ಶಿ ರಾಮಕೃಷ್ಣರವರು. ಬಳ್ಳಾರಿ ಜಿಲ್ಲಾ ಮಾಧ್ಯಮ ಸಹ ಸಂಚಾಲಕದ ತೊಗರಿ ರಾಜೀವ್. ಶ್ರೀಮತಿ ಶಿವಕೃಷ್ಣ. ರಾಜ್ಯ ಬಿಜೆಪಿ ಮಹಿಳಾ ಉಪಾಧ್ಯಕ್ಷರು. ಬಳ್ಳಾರಿ ಜಿಲ್ಲಾ ಮಹಿಳಾ ಅಧ್ಯಕ್ಷರಾದ ಕುಮಾರಿ ಸುಗುಣ. ಬಳ್ಳಾರಿ ಜಿಲ್ಲಾ ಬಿಜೆಪಿ ಕಾರ್ಯದರ್ಶಿ ಹಾಗೂ ಜಿಲ್ಲಾಮಾಹಿತಿ ಕೇಂದ್ರ ಕಾಲ್ ಸೆಂಟರ್‌ನ ಪ್ರಭಾ–ರಿಗಳಾದ ಶ್ರೀಮತಿ ಸುಮಾರೆಡ್ಡಿ. ಪುಷ್ಪಲತಾ. ಸುಬ್ಬರಾವ್. ಶಂಭು. ಮಲ್ಲಿಕಾರ್ಜುನ್ ಗೌಡ, ಜಿಲ್ಲಾ ಪದಾಧಿಕಾರಿಗಳು, ಮೋರ್ಚಾ ಪದಾಧಿಕಾರಿಗಳು, ಮಂಡಲ ಪದಾಧಿಕಾರಿಗಳು, ಮಂಡಲ ಮೋರ್ಚಾ ಪದಾಧಿಕಾ–ರಿಗಳು, ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ವೇಶ್ಯಾವಾಟಿಕೆ ದಂಧೆ: ಕಿರುತೆರೆ ನಟಿ ಬಂಧನ



ಬೆಂಗಳೂರು: ಕಿರುತೆರೆಯ ಖ್ಯಾತ ನಟಿ ಆರತಿ ಹರೀಶ್ ಚಂದ್ರ ಮಿತ್ತಲ್ ಅವರನ್ನು ವೇಶ್ಯಾವಾಟಿಕೆ ಆರೋಪದ ಅಡಿ ಪೊಲೀಸರು ಬಂಧಿಸಿದ್ದಾರೆ.

ಮಾಡೆಲ್ ಗಳನ್ನು ಬಳಕೆ ಮಾಡಿಕೊಂಡು ಆರತಿ ವೇಶ್ಯಾವಾಟಿಕೆ ನಡೆಸುತ್ತಿದ್ದರು ಎಂದು ಗೊತ್ತಾಗಿದೆ. ಮಾಹಿತಿ ಸಿಗುತ್ತಿದ್ದಂತೆಯೇ ಆರತಿಯನ್ನು ಬೆನ್ನತ್ತಿದ್ದ ಪೊಲೀಸರು ರೆಡ್ ಹ್ಯಾಂಡ್ ಆಗಿಯೇ ಹಿಡಿದಿದ್ದಾರೆ. ಅಪ್ನಾಪನ್ ಸೇ–ರಿದಂತೆ ಹಲವು ಜನಪ್ರಿಯ ಧಾರಾವಾಹಿಗಳಲ್ಲಿ ನಟಿಸಿರುವ ಆರತಿ, ಕಾಸ್ಟಿಂಗ್ ಡೈರೆಕ್ಟರ್ ಆಗಿಯೂ ಗುರುತಿಸಿಕೊಂಡವರು. ಇವುಗಳ ಜೊತೆಗೆ ಮುಂಬೈನಲ್ಲಿ ವೇಶ್ಯಾವಾಟಿಕೆ ನಡೆಸುತ್ತಿದ್ದರು ಎಂದು ಹೇಳಲಾಗುತ್ತಿದೆ. ಗ್ರಾಹಕರ ಮಾರುವೇಶದಲ್ಲಿ ಆರತಿಯನ್ನು ಸಂಪರ್ಕಿಸಿರುವ ಪೊಲೀಸರು ನಂತರ ಆರತಿಯನ್ನು ಬಂಧಿಸಿದ್ದಾರೆ. ಇವರ ಜೊತೆ ರಾಕೆಟ್ ನಲ್ಲಿ ಇಬ್ಬರು ಮಾಡೆಲ್ ಗಳು ಇದ್ದರು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಪೊಲೀಸ್ ಅಧಿಕಾರಿ ಮನೋಜ್ ಸುತಾರ್ ಅವ–ರಿಗೆ ಆರತಿ ನಡೆಸುತ್ತಿದ್ದ ವೇಶ್ಯಾವಾಟಿಕೆ ದಂಧೆಯ ಬಗ್ಗೆ ಸುಳಿವು ಸಿಕ್ಕಿತ್ತು. ಕೂಡಲೇ ಎಚ್ಚೆತ್ತುಕೊಂಡ ಅಧಿಕಾರಿ ತಮಗೆ ಇಬ್ಬರು ಹುಡುಗಿಯನ್ನು ಕಳುಹಿಸುವಂತೆ ಆರತಿಯನ್ನು ಸಂಪರ್ಕಿಸಿದ್ದಾರೆ. 60 ಸಾವಿರ ಬೇಡಿಕೆ ಇಟ್ಟು, ಹುಡುಗಿಯರನ್ನು ಕಳುಹಿಸುವುದಾಗಿ ಆರತಿ ತಿಳಿಸಿದ್ದರು. ಹಣ ಕೊಡುವುದಾಗಿಯೂ ಅಧಿಕಾರಿ ತಿಳಿಸಿದ್ದರು.

ಹೋಟೆಲ್ ರೂಮ್ ಗೆ ತೆರಳುವ ಮುನ್ನ ಸ್ವತಃ ಆರತಿಯೇ ಅಧಿಕಾರಿಗಳಿಗೆ ಕಾಂಡೋಮ್ ನೀಡಿದ್ದಾರೆ. ಇವೆಲ್ಲವನ್ನೂ ಪೊಲೀಸರು ರೆಕಾರ್ಡ್ ಮಾಡಿಕೊಂಡೇ ಆರತಿಯನ್ನು ಬಂಧಿಸಿದ್ದಾರೆ ಎಂದು ವರದಿಯಾಗಿದೆ. ಆರತಿ ಜೊತೆ ಯಾರೆಲ್ಲ ಇದ್ದಾರೆ ಎನ್ನುವುದರ ಕುರಿತು ಪೊಲೀಸರು ಮಾಹಿತಿ ಕಲೆಹಾಕುತ್ತಿದ್ದಾರೆ.

# ರೈಸ್ ಮಿಲ್ ಕಟ್ಟಡ ಕುಸಿತ; ನಾಲ್ವರು ಸಾವು



ಚಂಡೀಗಢ: ಮೂರು ಅಂತಸ್ತಿನ ರೈಸ್ ಮಿಲ್ ಕಟ್ಟಡ ಕುಸಿದು ನಾಲ್ವರು ಸಾವನ್ನಪ್ಪಿ, 20 ಮಂದಿ ಗಂಭೀರ ಗಾಯಗೊಂಡಿರುವ ಘಟನೆ ಹರಿಯಾಣದ ಕರ್ನಾಲ್‌ನಲ್ಲಿ ನಡೆದಿದೆ.

ಸೋಮವಾರ ರಾತ್ರಿ ಈ ಘಟನೆ ನಡೆದಿದ್ದು, ಕಟ್ಟಡ ಕುಸಿದ ಸಂದರ್ಭದಲ್ಲಿ ಕಟ್ಟಡದೊಳಗೆ ಸುಮಾರು 150 ಜನ ಕಾರ್ಮಿಕರಿದ್ದರು ಎಂದು ವರದಿಗಳು ತಿಳಿಸಿವೆ. ಕಟ್ಟಡ ಕುಸಿದ ವೇಳೆ 24 ಕಾರ್ಮಿಕರು ಅವಶೇಷಗಳ ಅಡಿಯಲ್ಲಿ ಸಿಲುಕಿಕೊಂಡಿದ್ದರು. ತಕ್ಷಣವೇ ಅಗ್ನಿಶಾಮಕ ದಳ, ಪೊಲೀಸ್ ಹಾಗೂ ಆಂಬುಲೆನ್ಸ್ ಸ್ಥಳಕ್ಕೆ ಧಾವಿಸಿದ್ದು, ಕಾರ್ಯಾಚರಣೆ ನಡೆಸಿ ಅವಶೇಷಗಳ ಅಡಿಯಲ್ಲಿ ಸಿಲುಕಿದ್ದವರನ್ನು ಹೊರತೆಗೆದಿದ್ದಾರೆ. ಈ ವೇಳೆ ನಾಲ್ವರು ಮೃತಪಟ್ಟಿದ್ದು, ಉಳಿದ 20 ಮಂದಿ ಗಂಭೀರ ಗಾಯಗೊಂಡಿದ್ದಾರೆ.


ರಕ್ಷಣಾ ಕಾರ್ಯಾಚರಣೆಗಳು ಮುಂದುವರೆದಿದ್ದು, ಘಟನೆ ಕುರಿತು ತನಿಖೆ ನಡೆಸಲು ಸಮಿತಿ ರಚಿಸಲಾಗುವುದು. ಅಲ್ಲದೇ ರೈಸ್ ಮಿಲ್ ಮಲೀಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಅನೀಶ್ ಯಾದವ್ ತಿಳಿಸಿದ್ದಾರೆ.

# ಬಾಲಚಂದ್ರ ಜಾರಕಿಹೊಳಿ ಗೆಲುವಿಗೆ 18ಕಿ.ಮೀ. ದೀರ್ಘದಂಡ ನಮಸ್ಕಾರದ ಹರಕೆ ಹೊತ್ತ ಅಭಿಮಾನಿ



ಬೆಳಗಾವಿ: ತಮ್ಮಿಷ್ಟದ ಶಾಸಕರು ಅಧಿಕಾರಕ್ಕೆ ಬರಬೇಕೆಂದು ಅಭಿಮಾನಿಗಳ ಆಸೆ ಪಡುವುದು ಸಾಮಾನ್ಯ. ಆದರೆ ಇಲ್ಲೊಬ್ಬ ಅಭಿಮಾನಿಗೆ ಆಸೆ ಮಾತ್ರವಲ್ಲ, ಹರಕೆಯನ್ನು ಕಟ್ಟಿಕೊಂಡಿದ್ದಾನೆ. ಬರೋಬ್ಬರಿ 18 ಕಿ.ಮೀ ದೂರ ದೀರ್ಘದಂಡ ನಮಸ್ಕಾರ ಹಾಕುವ ಮೂಲಕ ದೇವರಿಕೆ ಹರಕೆ ಕಟ್ಟಿಕೊಂಡಿದ್ದಾನೆ. ಬಿಜೆಪಿಯಿಂದ ಬಾಲಚಂದ್ರ ಜಾರಕಿಹೊಳಿ ಸ್ಪರ್ಧಿಸುತ್ತಿದ್ದಾರೆ. ಅರಭಾವಿ ವಿಧಾನಸಭಾ ಕ್ಷೇತ್ರದಿಂದ ಚುನಾವಣೆಗೆ ಸ್ಪರ್ಧಿಸುತ್ತಿದ್ದಾರೆ. ಹಾಗಾಗಿ ಈ ಕ್ಷೇತ್ರದಿಂದ ಅತಿ ಹೆಚ್ಚಿನ ಲೀಡ್ ನಿಂದ ಅವರನ್ನು ಗೆಲ್ಲಿಸುವಂತೆ ರಮೇಶ್ ತಿಗಡಿ ಎಂಬಾತ ಗೋಕಾಕ್ ನ ಮಹಾಲಕ್ಷ್ಮೀ ಗೆ ಅತಿ ಹೆಚ್ಚಿನ ಲೀಡ್ ನಿಂದ ಗೆಲ್ಲಿಸುವಂತೆ ಬರೋಬರಿ 18 ಕಿ.ಮೀ.ದೂರದಿಂದ ದೀರ್ಘದಂಡ ನಮಸ್ಕಾರದ ಹರಕೆ ಕಟ್ಟಿಕೊಂಡಿದ್ದಾನೆ. ಮೂಡಲಗಿ ತಾಲೂಕಿನ ಚಿಗಡೋಳ್ಳಿ ಗ್ರಾಮದಿಂದ ಗೋಕಾಕ್ ಲಕ್ಷ್ಮೀ ದೇವಸ್ಥಾನದವರೆಗೆ ಈ ದೀರ್ಘದಂಡ ನಮಸ್ಕಾರದ ಹರಕೆಯನ್ನು ಈಡೇರಿಸುತ್ತಿದ್ದಾನೆ. ರಮೇಶ್ ತಿಗಡಿಗೆ ಆತನ ಸಂಬಂಧಿಗಳ ಸಾಥ್ ನೀಡಿದ್ದಾರೆ.

# ಕಾರು–ಜೀಪ್ ಮುಖಾಮುಖಿ ಡಿಕ್ಕಿ: ನಾಲ್ವರ ಸಾವು



ಮಂಗಳೂರು: ಕಾರು ಮತ್ತು ಜೀಪ್ ಪರಸ್ಪರ ಡಿಕ್ಕಿ ಹೊಡೆದ ಪರಿನಾಮ ನಾಲ್ವರು ಸಾವನ್ನಪ್ಪಿ ಹಲವರು ಗಂಭೀರ ಗಾಯಗಳಾಗಿರುವ ಘಟನೆ ದಕ್ಷಿಣ ಕನ್ನಡ ಜಿಲ್ಲೆಯ ಕಡಬದ ನೆಟ್ಟಣ ಸಮೀಪ ನಡೆದಿದೆ.

ಗಂಭೀರವಾಗಿ ಗಾಯಗೊಂಡ ಇಬ್ಬರನ್ನು ಕೂಡಲೇ ಪುತ್ತೂರು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸ್ಥಳಕ್ಕೆ ಧಾವಿಸಿ ರೋ ಕಡಬ ಪೊಲೀಸರು ಮೃತರು ಹಾಗೂ ಗಾಯಾಳುಗಳ ಮಾಹಿತಿಯನ್ನು ಕಲೆ ಹಾಕುತ್ತಿದ್ದಾರೆ.

# ದಾನ ಧರ್ಮದ ಸಂಕೇತವೇ ರಂಜಾನ: ಎ ಡಿ ಕೋಲಕಾರ



ಗಜೇಂದ್ರಗಡ: ರಂಜಾನ್ ಹಬ್ಬವು ದಾನ ಧರ್ಮದ ಸಂಕೇತವಾಗಿದ್ದು, ಬಡ ಕುಟುಂಬಗಳು ಹಬ್ಬವನ್ನು ಸಂತಸದಿಂದ ಆಚರಿಸಲಿ ಎಂಬ ಉದ್ದೇಶದಿಂದ ಸಂಸ್ಥೆಯು ಆಹಾರ ಧಾನ್ಯದ ಕಿಟ್ ಗಳನ್ನು ವಿತರಣೆ ಮಾಡುತ್ತಿದೆ ಎಂದು ಅಂಜುಮಾನ್ ಇಸ್ಲಾಂ ಕಮೀಟಿ ಅಧ್ಯಕ್ಷ ಎ ಡಿ ಕೋಲಕಾರ ತಿಳಿಸಿದರು.

ನಗರದ ಜಾಮೀಯಾ ಮಸೀದಿಯಲ್ಲಿ ರಂಜಾನ ಹಬ್ಬದ ನಿಮಿತ್ತ ಮುಸ್ಲಿಂ ಸಮುದಾಯದ ಬಡ ವರ್ಗದವರಿಗೆ ಆಹಾರ ಧಾನ್ಯದ ಕಿಟ್ ವಿತರಿಸಿ ಅವರು ಮಾತನಾಡಿದರು.

ರಂಜಾನ್ ಹಬ್ಬದ ಸಂದರ್ಭದಲ್ಲಿ ಸಮುದಾಯದ ಯಾರೊಬ್ಬರು ಸಹ ಹಸಿನಿಂದ ಬಳಲಬಾರದು ಎಂಬ ಸದುದ್ದೇಶದಿಂದ ಮುಸ್ಲಿಂ ಸಮುದಾಯದ ಬಡವರ್ಗದವ–ರಿಗೆ ಸಂಸ್ಥೆಯಿಂದ ಕಿಟ್ ವಿತರಣೆ ಮಾಡುತ್ತಿದ್ದೇವೆ ಎಂದರು.

ಜಾಮೀಯ ಮಸೀದಿಯ ಮೌಲಾನ ಖುಷ್ತಾರ ನೂರಾನಿ ಮಾತನಾಡಿ ಅಲ್ಲಾಹನ ಸೃಷ್ಟಿಯಲ್ಲಿ ಉಳ್ಳವರು ಇದ್ದಾರೆ, ಉಳ್ಳದವರೂ ಇದ್ದಾರೆ. ಇರುವವನು ಇಲ್ಲದವನಿಗೆ ಮಾಡಬೇಕಾದ ಧನ ಸಹಾಯ ಜಕಾತ್ ಮೂಲಕ ನಡೆದು ಹೋಗುತ್ತದೆ.

ಜಕಾತ್ ದಾನವಾಗಲಿ, ಕೊಡುಗೆ ಯಾಗಲಿ ಅಲ್ಲ. ಅದು ಬಡವರ ಹಕ್ಕು. ಜಕಾತ್ ಸಮಾಜದ ಎಲ್ಲ ವರ್ಗದ ಜನಗಳಿಗೆ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಳ್ಳುವ ಸಮಾನ ಅವಕಾಶ ನೀಡುತ್ತದೆ.

ತನ್ಮೂಲಕ ಸೋದರತ್ವ ಭಾವನೆಯನ್ನು ಅವರಲ್ಲಿ ಬಿತ್ತುತ್ತದೆ ಎಂದು ತಿಳಿಸಿದರು.

ಈ ವೇಳೆ ಪುರಸಭೆ ಸದಸ್ಯ ರಾಜು ಸಾಂಗ್ಲೀಕಾರ, ಅಂಜುಮಾನ್ ಇಸ್ಲಾಂ ಕಮೀಟಿ ಕಾರ್ಯದರ್ಶಿ ಮಾಸುಮಲಿ ಮದಗಾರ, ಮಾತನಾಡಿದರು.

ಮೌಲಾನ ಖುಷ್ತಾರ ನೂರಾನಿ, ಮೌಲಾನಾ ರಫೀಕ, ಮೌಲಾನಾ ಯಾಸೀನ ಅವರು ದಿವ್ಯ ಸಾನಿಧ್ಯ ವಹಿಸಿದ್ದರು.

ಒಟ್ಟಾರೆ 170 ಕ್ಕೂ ಹೆಚ್ಚು ಆಹಾರ ಧಾನ್ಯದ ಕಿಟ್ ಗಳನ್ನು ವಿತರಣೆ ಮಾಡಲಾಯಿತು.

## ಚುನಾವಣಾ ತರಬೇತಿಯಲ್ಲಿದ್ದ ನೌಕರ ಹೃದಯಾಘಾತದಿಂದ ಸಾವು

ಚಾಮರಾಜನಗರ : ಚುನಾವಣಾ ತರಬೇತಿಯಲ್ಲಿದ್ದ ನೌಕರ ಹೃದಯಾಘಾತದಿಂದ ಸಾವನಪ್ಪಿದ ಘಟನೆ ಬೆಳಕಿಗೆ ಬಂದಿದೆ. ಜಗದೀಶ್ (40) ಎಂಬ ನೌಕರ ಮೃತಪಟ್ಟಿದ್ದಾರೆ. ಹನೂರಿನ ವಿವೇಕಾನಂದ ಶಾಲೆಯಲ್ಲಿ ಚುನಾವಣೆಯ ತರಬೇತಿ ಏರ್ಪಡಿಸಿದ್ದರು. ತರಬೇತಿ ಆರಂಭವಾಗುತ್ತಿದ್ದಂತೆ ಜಗದೀಶ್ ಎದೆನೋವಿನಿಂದ ಕುಸಿದು ಬಿದ್ದಿದ್ದಾರೆ. ಆದ–ರೆ ತಕ್ಷಣವೇ ಅವರನ್ನು ಆಸ್ಪತ್ರೆಗೆ ಸಾಗಿಸುವ ಕೆಲಸ ನಡೆಯಿತಾದರು, ಮಾರ್ಗ ಮಧ್ಯೆಯೇ ಜಗದೀಶ್ ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಜಿಲ್ಲಾಧಿಕಾರಿ ಭೇಟಿ ನೀಡಿ ಪರಿಶೀಲಿಸಿದ್ದಾರೆ.

# ಪತ್ರಕರ್ತ ಮಹಾಂತೇಶ ರಾಜಗೋಳಿಗೆ ಮಲ್ಲಸರ್ಜ ಪ್ರಶಸ್ತಿ



ಬೈಲಹೊಂಗಲ: ವಿಜಯಪೂರ ಉತ್ನಾಳದ ಚೆನ್ನಮ್ಮ ವಿದ್ಯಾವರ್ಧಕ ಸಂಸ್ಥೆ ಹಾಗೂ ಅಖಿಲ ಕರ್ನಾಟಕ ಪಂಚಮಸಾಲಿ ಪರಿಷತ್ತು ಕೊಡಮಾಡುವ 2023 ನೇ ಸಾಲಿನ ಮಲ್ಲಸರ್ಜ ದೇಸಾಯಿ ಜಿಲ್ಲಾ ಮಟ್ಟದ ಪ್ರಶಸ್ತಿಗೆ ಪಟ್ಟಣದ ಹಿರಿಯ ಪತ್ರಕರ್ತ, ತಾಲೂಕಾ ಕಜಾಪ ವಕ್ತಾರ ಮಹಾಂತೇಶ ಮಲ್ಲಪ್ಪ ರಾಜಗೋಳಿ ಭಾಜನರಾಗಿದ್ದಾರೆ.

ರವಿವಾರ ವಿಜಯಪೂರದ ಜಲನಗರದ ಕೆ.ಕೆ.ಕಾಲೋನಿಯ ಇಂದಿರಾ ಪ್ರಾಥಮಿಕ ಶಾಲೆಯಲ್ಲಿ ನಡೆದ ವಿವಿಧ ಕ್ಷೇತ್ರದ ಸಾಧಕರ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಮಹಾಂತೇಶ ಅವರಿಗೆ ಮಾಧ್ಯಮ ಕ್ಷೇತ್ರ ಪರಿಗಣಿಸಿ ಈ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಈ ಸಂದರ್ಭದಲ್ಲಿ ಉತ್ನಾಳದ ಚೆನ್ನಮ್ಮ ವಿದ್ಯಾವರ್ಧಕ ಸಂಸ್ಥೆಯ ಸಂಸ್ಥಾಪಕ, ಅಧ್ಯಕ್ಷ ಬಸವರಾಜ ಬಾಗೇವಾಡಿ, ಮಹಾನಗರ ಪಾಲಿಕೆ ಸದಸ್ಯ ಪ್ರೇಮಾನಂದ ಬಿರಾದಾರ, ಸಂಸ್ಥೆಯ ಕಾರ್ಯದರ್ಶಿ ಸುರೇಖಾ ಬಾಗಲಕೋಟೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಗಮಕ ಕುರಿತು ಆಸಕ್ತಿ ಮೂಡಿಸಿದ: ಯಶಸ್ವಿ ಸಮ್ಮೇಳನ



ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಗಮಕ ಕಲಾ ಪರಿಷತ್ತು ಹಾಗೂ ಬೆಳಗಾವಿಯ ಕರ್ನಾಟಕ ಗಮಕ ಕಲಾ ಪರಿಷತ್ತು ಜಿಲ್ಲಾ ಘಟಕ, ಶ್ರೀ ವಾಗ್ದೇವಿ ಸಂಗೀತ–ಗಮಕ ಕಲಾ ಸಂಘ ಇವರ ಸಹಯೋಗದೊಂದಿಗೆ ಇದೇ ದಿ. 16 ಮತ್ತು 17 ರಂದು ಅನಗೋಳದಲ್ಲಿರುವ ಸಂತ ಮೀರಾ ಆಂಗ್ಲ ಮಾಧ್ಯಮ ಶಾಲೆ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ 13 ನೇ ಅಖಿಲ ಕರ್ನಾಟಕ ಗಮಕ ಕಲಾ ಸಮ್ಮೇಳನದ ಸಮಾರೋಪ ಸಮಾರಂಭದ ಸಮಾರೋಪ ಸಮಾರಂಭ ಜರುಗಿತು.

ಅತಿಥಿಗಳಾಗಿ ಆಗಮಿಸಿದ್ದ ಹಿರಿಯ ಪತ್ರಕರ್ತ, ಲೇಖಕ ಎಲ್. ಎಲ್. ಶಾಸ್ತ್ರಿಯವರು ಮಾತನಾಡುತ್ತ 13 ನೇ ಅಖಿಲ ಕರ್ನಾಟಕ ಗಮಕ ಕಲಾ ಸಮ್ಮೇಳನವು ಅತ್ಯಂತ ಯಶಸ್ವಿ ಸಮ್ಮೇಳನವಾಗಿತ್ತು. ಬೆಳಗಾವಿಯ ಜನರಿಗೆ ಅಭಿಮಾನ ಮತ್ತು ಸಂತೋಷ ತಂದಿದೆ. ಎರಡು ದಿನಗಳ ಕಾಲ ನಡೆದ ಸಮ್ಮೇಳನವು ಗಮಕ ಕಲೆಯ ಕುರಿತು ಮಾಹಿತಿ ಇಲ್ಲದ ಜನರಲ್ಲಿ ಪರಚಯಿಸುವುದರೊಂದಿಗೆ ಆಸಕ್ತಿ ಅಭಿರುಚಿಯನ್ನುಂಟು ಮಾಡಿದೆ ಎಂದು ಹೇಳಿದರು.

ಬೆಳಗಾವಿ ಜನತೆಗೆ ಗಮಕ ಕಲೆ ತಲುಪಿದೆ ಎಂದರೆ ಅದಕ್ಕೆ ಕಾರಣರಾದವರು ಶ್ರೀಮತಿ ಭಾರತಿ ಭಟ್ ಅವರು. ಮೊದಲು ಗಮಕ ಕಲೆಯನ್ನು ಕಲಿಸುವವರು ಇದ್ದಿರಲೇ ಇಲ್ಲ. ಹಿಂದುಸ್ಥಾನಿ ಸಂಗೀತ ಹೆಚ್ಚು ಪ್ರಭಾವ ಬೀರಿದ್ದ ಪ್ರದೇಶ ಇದಾಗಿದ್ದರಿಂದ ಗಮಕ ಬೆಳೆಯಲು ಹೆಚ್ಚು ಅವಕಾಶ ಇಲ್ಲಿರಲಿಲ್ಲ. ಸುಮಾರು ಮೂರು ದಶಕಗಳ ಹಿಂದೆ ದೂರದೂರಿಂದ ಶ್ರೀಮತಿ ಭಟ್ ಅವರು ಇಲ್ಲಿಗೆ ಬಂದು ಸಂಗೀತ ಶಾಲೆಯನ್ನು ಪ್ರಾರಂಭಿಸಿ ಇಂದು ನೂರಾರು ಶಿಷ್ಯರಲ್ಲಿ ಅದರ ಅಭಿರುಚಿಯನ್ನು ಹಂಚುವಲ್ಲಿ ಯಶಸ್ವಿಯಾಗಿದ್ದಾರೆ ಎಂದ ಹೇಳಿದರು.

ಸರ್ವಾಧ್ಯಕ್ಷರಾದ ತೆಕ್ಕೆಕೆರೆ ಸುಬ್ರಹ್ಮಣ್ಯ ಭಟ್ಟ ಮಾತನಾಡಿ ಸಮ್ಮೇಳನ ಕಾರ್ಯವನ್ನು ಪ್ರಶಂಸಿಸುತ್ತ ಎಲ್ಲರ ಸಹಕಾರವನ್ನು ಕೊಂಡಾಡಿದರು. ಅಧ್ಯಕ್ಷರಾದ ಶ್ರೀಮತಿ ಶಾಂತಾ ಗೋಪಾಲ, ಶ್ರೀಮತಿ ಗಂಗಮ್ಮ ಕೇಶವ ಮೂರ್ತಿ, ಡಾ. ಸಿ. ಕೆ. ಜೋರಾಪುರ ಮಾತನಾಡಿದರು.

ಸರ್ವಾಧ್ಯಕ್ಷರಾದ ತೆಕ್ಕೆಕೆರೆ ಸುಬ್ರಹ್ಮಣ್ಯ ಭಟ್ಟ ಅವರಿಗೆ ಶಾಲು ಹೊದಿಸಿ, ಫಲಪುಷ್ಪ, ನೆನಪಿನ ಕಾಣಿಕೆ ಪ್ರಶಸ್ತಿ ಪತ್ರ ನೀಡಿ ಗೌರವಿಸಿದರು

ಎಂ. ಎ. ಪಾಟೀಲ, ಹೇಮಾ ಸೊನೊಳ್ಳಿ, ಆನಂದ ಪುರಾಣಿಕ, ಸುಧಾ ಪಾಟೀಲ, ಜಯಶೀಲಾ ನಿರಾಕಾರಿ, ಸುಜಾತಾ ದಪ್ತರದಾರ ಉಪಸ್ಥಿತರಿದ್ದರು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾವಗೀತೆ, ಭಕ್ತಿಗೀತೆ, ವಾಚನ–ವ್ಯಾಖ್ಯಾನ, ಕೋಲಾಟ, ದೃಶ್ಯರೂಪ ಮುಂತಾದವುಗಳು ಜರುಗಿದವು.

ಶ್ರೀ ವಾಗ್ದೇವಿ ಸಂಗೀತ ವಿದ್ಯಾಲಯದ ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಶ್ರೀಮತಿ ರಾಜೇಶ್ವರಿ ಹಿರೇಮಠ ನಿರೂಪಿಸಿದರು.

# ಜಾತಿ ನಿಂದನೆ ಮಾಡಿ ಅವಮಾನ ಮಾಡಿರುವ ಬಿಜೆಪಿ ಕಾರ್ಯಕರ್ತರು



ಗುಡಿಬಂಡೆ: ಬಿಜೆಪಿ ಪಕ್ಷದ ಅಭ್ಯರ್ಥಿ ಸಿ ಮುನಿರಾಜು ರವರ ನಾಮಪತ್ರ ಸಲ್ಲಿಕೆ ಕಾರ್ಯಕ್ರಮಕ್ಕೆ ಎಲ್ಲೋಡು ಗ್ರಾಮದ ಆದಿ ಕರ್ನಾಟಕ ಜಾತಿಯವರನ್ನು ಬಿಜೆಪಿ ಕಾರ್ಯಕರ್ತರು ವಾಹನಗಳಿಗೆ ಹತ್ತಲು ಬಿಡದೇ ಜಾತಿ ನಿಂದನೆ ಮಾಡಿದ್ದಾರೆ ಎಂದು ನಿಂದನೆಗೆ ಒಳಗಾಗಿರುವಂತವರು ಆರೋಪಿಸಿದ್ದಾರೆ.

ಕರ್ನಾಟಕ ರಾಜ್ಯ ವಿಧಾನ ಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಮಂಗಳವಾರ ಬಾಗೇಪಲ್ಲಿ ನಗರದ ತಹಶೀಲ್ದಾರ್ ಕಛೇರಿಯಲ್ಲಿ ನಾಮಪತ್ರ ಸಲ್ಲಿಸಲು ಕ್ಷೇತ್ರದ ಬಹುತೇಕ ಜನರನ್ನು ಕಾರ್ಯಕ್ರಮಕ್ಕೆ ಕರೆತರಲು ವಾಹನಗಳನ್ನು ಕಳುಹಿಸಿರುತ್ತಾರೆ.

ಹೀಗೇ ಎಲ್ಲೋಡು ಗ್ರಾಮಕ್ಕೆ ಸಹ ಬಿಜೆಪಿ ಪಕ್ಷದ ಅಭ್ಯರ್ಥಿ ವಾಹನಗಳನ್ನು ಕಳಿಸಿರುತ್ತಾರೆ . ಗ್ರಾಮದ ಕೆಲವರು ವಾಹನಗಳಲ್ಲಿ ಹತ್ತಿರುತ್ತಾರೆ. ಅದೇ ಗ್ರಾಮದ ಎಸ್ಸಿ ಕಾಲೋನಿಯ ಜನರು ವಾಹನಗಳನ್ನು ಹತ್ತಲು ಹೋದರೇ ಅಲ್ಲೇ ಸ್ಥಳದಲ್ಲಿ ಇದ್ದಂತಹ ಬಿಜೆಪಿ ಕಾರ್ಯಕರ್ತರು ನೀವು ಮಾದಿಗರು ಈ ವಾಹನಗಳಲ್ಲಿ ಹತ್ತಬೇಡಿ ನೀವು ಬರಬೇಡಿ ನಾವು ಮಾತ್ರ ಹೋಗುತ್ತೇವೆ ಎಂದು ಜಾತಿ ನಿಂದನೆ ಮಾಡಿದ್ದಾರೆ .ಎಂದು ನಿಂದನೆಗೆ ಒಳಗಾಗಿರುವ ಮಹಿಳೆಯರು ಗಂಭೀರವಾಗಿ ಆರೋಪಿಸಿದ್ದಾರೆ.

ವಾಹನಗಳು ನಿಂತಿದ್ದ ಸ್ಥಳದಲ್ಲಿ ವೆಂಕಟಮ್ಮ ಎಂಬವರನ್ನು ಕತ್ತು ಹಿಡಿದು ತಳ್ಳಿ ಜಾತಿ ಎತ್ತಿ ಬೈದು ನನಗೆ ಜಾತಿ ನಿಂದನೆ ಮಾಡಿ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಈ ವಿಚಾರವಾಗಿ ಜಾತಿ ನಿಂದನೆ ಮಾಡಿರುವವರ ಮೇಲೆ ಜಾತಿ ನಿಂದನೆ ದೂರು ದಾಖಲಿಸುತ್ತೇವೆ ಎಂದು ತಿಳಿಸಿದ್ದಾರೆ.

# ಕಲಾಬಿಂಬ ವಸ್ತು ಪ್ರದರ್ಶನ ಯಶಸ್ವಿ




ಬೆಳಗಾವಿ: ಕ್ರಾಂತಿ ಮಹಿಳಾ ಮಂಡಳ ಹಾಗೂ ಉಮಾ ಸಂಗೀತ ಪ್ರತಿಷ್ಠಾನ ಸಂಸ್ಥೆಗಳು ದೇಶಪಾಂಡೆ ಸ್ಟಾರ್ಟ್ ಅಪ್ ಸಹಯೋಗ ದೊಂದಿಗೆ ಗೋವಾವೇಸದಲ್ಲಿರು ವ ಮಹಾವೀರ ಭವನದಲ್ಲಿ ಕಲಾಬಿಂಬ ವಸ್ತು ಪ್ರದರ್ಶನವನ್ನು ಆಯೋಜಿಸಲಾಗಿತ್ತು ಈ ವಸ್ತು ಪ್ರದರ್ಶನ 15 ಮತ್ತು16 ಎರಡು ದಿನಗಳ ಕಾಲ ಯಶಸ್ವಿಯಾಗಿ ನೆರವೇರಿತು.

ಸುಮಾರು 40 ಮಾರಾಟ ಮಳಿಗೆಗಳು ಹಾಗೂ 10 ಉಪಹಾರ ಮಳಿಗೆಗಳು ಬಂದಿದ್ದವು ಈ ಕಲಾಬಿಂಬ ವಸ್ತು ಪ್ರದರ್ಶನದಿಂದ ಬಂದ ಹಣವನ್ನು ತಿಲಕವಾಡಿಯ ಮಂಡೋಳಿ ರಸ್ತೆಯ ಶಾಂತಿನಗರದ ಆಶ್ರಮದಲ್ಲಿ ಕಲಿಯುತ್ತಿರುವ ಬಡ ಹೆಣ್ಣು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ನೀಡಲಾಗುವುದು ಕಾರ್ಯಕ್ರಮದ ಉದ್ಘಾಟನೆಯನ್ನು ಮಾಡಿದ ಸಮಾಜ ಸೇವಕಿ ತುಳಸಾ ಪಾಟೀಲ ಮಾತನಾಡಿ ಮಂಡಳವು ಮಾಡಿರುತ್ತಿರುವ ಸಮಾಜಮುಖಿ ಕಾರ್ಯಗಳ ಬಗ್ಗೆ ಶ್ಲಾಘನೆಯನ್ನು ಮಾಡಿದರು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮತ್ತು ಹಲವಾರು ಕ್ಷೇತ್ರಗಳಲ್ಲಿ ಪ್ರಶಸ್ತಿಗಳನ್ನು ಪಡೆದು.

ಈ ಕಾರ್ಯಕ್ರಮದಲ್ಲಿ ಸನ್ಮಾನಗೊಂಡ ಶೀತಲ ಚಿಲಿಮಿ ಅವರು ಮಾತನಾಡಿ ನಾವೆಲ್ಲ ಹೆಣ್ಣು ಮಕ್ಕಳು ಯಾರಿಗೆ ಏನು ಕಡಿಮೆ ಇಲ್ಲ ಮನೆಯನ್ನು ನಡೆಸಿಕೊಂಡು ಹೊರಗೂ ಕೂಡ ದುಡಿಯುತ್ತಿದ್ದೇವೆ ಯಾರಲ್ಲಿ ಯಾವ ಪ್ರತಿಭೆ ಇರುತ್ತದೆ ಅದನ್ನು ಗುರುತಿಸಿ ನಾವು ಅಳವಡಿಸಿಕೊಳ್ಳಬೇಕು ಮತ್ತು ಎಲ್ಲಿ ಅವಶ್ಯಕತೆ ಇರುತ್ತದೆಯೋ ಅದನ್ನು ಗುರುತಿಸಿ ಅವರಿಗೆ ನಮ್ಮ ಸಹಾಯ ಮುಟ್ಟುವಂತೆ ಮಾಡಬೇಕೆಂದರು.

ಮುಖ್ಯ ಅತಿಥಿಗಳಾದ ಶೋಭಾ ದೊಡ್ಡಣ್ಣವರ ಅವರು ಮಾತನಾಡಿ ಎಷ್ಟೊಂದು ಒಗ್ಗಟ್ಟಿನಿಂದ ಕೆಲಸ ಮಾಡುತ್ತಿರುವ ಕ್ರಾಂತಿ ಮಹಿಳಾ ಮಂಡಳದ ಕಾರ್ಯವೈಖರಿಯನ್ನು ಮೆಚ್ಚಿ ಸ್ಟಾರ್ ಹೋಲ್ಡರ್ ಗಳಿಗೆ ಶುಭ ಕೋರಿದರು ವೇದಿಕೆಯ ಮೇಲೆ ಡಾ. ರಾಜೇಂದ್ರ ಮಠದ ವೀರಯ್ಯ ಹಿರೇಮಠ ಆಶಾ ನಿಲಜಿಗಿ ಉಪಸ್ಥಿತ–ರಿದ್ದರು ಅಧ್ಯಕ್ಷರಾದ ಮಂಗಲ ಮಠದವರು ಸ್ವಾಗತಿಸಿದರು ಕಾರ್ಯದರ್ಶಿಗಳಾದ ರತ್ನಶ್ರೀ ಗುಡೇರ ಪ್ರಾಸ್ತಾವಿಕವಾಗಿ ಮಾತನಾಡಿದರು ಪ್ರೇಮಾ ಉಪಾಧ್ಯಾಯ ಅವರ ಸ್ವಾಗತ ನೃತ್ಯದೊಂದಿಗೆ ಹಾಗೂ ಸುಕನ್ಯಾ ಸೂಜಿ ಪುಷ್ಪಾ ನಿಲಜಿಗಿ ಮನಿಷಾ ಮಜಲಿ ಗೀತಾ ಎಮ್ಮಿ ಅವರ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು.

ಅತಿಥಿ ಪರಿಚಯವನ್ನು ಮಮತಾ ಅಂಟಿನ್ ರೇಣುಕಾ ಕಾಂಬಳೆ ಭಾರತಿ ರತ್ನಪ್ಗೋಳ ಹೇಮಾ ಭರಬರಿ ಶೋಭಾ ಕಾಡನ್ನವರ ಹಾಗೂ ಭಾರತಿ ಕೆರೂರ ಮಾಡಿದರು ತ್ರಿಶೀಲಾ ಪಾಯಪ್ಪನವರ್ ಮತ್ತು ಅಕ್ಷತಾ ಪಾಟೀಲ್ ನಿರೂಪಣೆ ಮಾಡಿದರು ವಂದನಾರ್ಪಣೆಯನ್ನ ದೀಪ್ತಿ ಕಾಗವಾಡ ಮಾಡಿದರು ಕಲಾಬಿಂಬ ಕಾರ್ಯಕ್ರಮದಲ್ಲಿ ಸಂಜೆ ಮಕ್ಕಳಿಗಾಗಿ ಡ್ರಾಯಿಂಗ್ ಕಾಂಪಿಟೇಶನ್ ಅನ್ನು ಏರ್ಪಡಿಸಲಾಗಿ–ತ್ತು ಈ ಡ್ರಾಯಿಂಗ್ ಸ್ಪರ್ಧೆಯ ಜವಾಬ್ದಾರಿಯನ್ನು ಅಶ್ವಿನಿ ನವಲೆ ಅವರು ತೆಗೆದುಕೊಂಡಿದ್ದರು ಸುಮಾರು 70 ಮಕ್ಕಳು ಸುಂದರವಾದ ಚಿತ್ರವನ್ನು ಬಿಡಿಸುವುದರ ಮೂಲಕ ತಮ್ಮ ಕುಶಲತೆಯನ್ನು ಮೆರೆದರು ಕ್ರಮವಾಗಿ ಬಹುಮಾನ ಪಡೆದ ಮಕ್ಕಳ ಹೆಸರು ಈ ಕೆಳಗಿನಂತಿವೆ ಬಹುಮಾನ ಫಸ್ಟ್ ರಾಧಿಕಾ ಕಾಕಡೆ ಸೆಕೆಂಡ್ ಹನ್ಸಿಕಾ ಮಿಶ್ರಾ ಥರ್ಡ್ ಸಾನ್ವಿ ಜಕ್ಕಣ್ಣವರ್, ಅನನ್ಯ ಪಾಟೀಲ ದಕ್ಷ ಜಾದವ ಸಮಂತಾ ಪಾಟೀಲ ಫಸ್ಟ್ ಅನನ್ಯ ಸೋಮನ್ನಾಚೆ ಸೆಕೆಂಡ್ ಸರ್ವೇಶ್ ರೇವಣಕ ರ್ತರ್ಡ್ ಮಾನಸಿ ಗೆಂಜಿ ವಿಭಾವತಿ ಬಡಮಂಜಿ ನಿಹಾರ್ ಮುಜುಕ ಪೂರ್ವಾ ಜಾಧವ್.

# ಬೈಪಾಸ್ ಸರ್ವಿಸ್ ರಸ್ತೆ ಬದಿ ಕದಲದೇ ಕುಳಿತ ಚಿರತೆ



ಗದಗ: ಗದಗ ನಗರದ ಬಿಂಕದಕಟ್ಟಿ ಬಳಿ ಬೈಪಾಸ್ ಸರ್ವಿಸ್ ರಸ್ತೆಯಲ್ಲಿ ಚಿರತೆಯೊಂದು ಕಾಣಿಸಿಕೊಂಡಿದ್ದು, ವಾಹನ ಸವಾರರು ಆತಂಕಕ್ಕೆ ಒಳಗಾದರು. ಮೊದಮೊದಲು ಸಾರ್ವಜನಿಕರು, ವಾಹನ ಸವಾರರು ಯಾವುದೋ ಬೀದಿನಾಯಿ ರಸ್ತೆ ಬದಿ ಕುಳಿತಿ–ರಬಹುದು ಎಂದು ಊಹಿಸಿದ್ದರು. ಸಮೀಪ ಬಂದು ನೋಡಿದಾಗ ಅದು ಚಿರತೆ ಎಂದು ತಿಳಿದು ಭಯಪಟ್ಟರು.

ಕಾರಿನಲ್ಲಿ ಸಂಚರಿಸುತ್ತಿದ್ದ ಸವಾರರೊಬ್ಬರು ರಸ್ತೆ ಬದಿ ಕುಳಿತ ಚಿರತೆಯನ್ನು ಮೊಬೈಲ್‌ನಲ್ಲಿ ಚಿತ್ರಿಕರಿಸಿದ್ದು, ಗದಗದಲ್ಲಿ ಚಿರತೆ ಸುದ್ದಿ ಕ್ಷಣಮಾತ್ರದಲ್ಲೇ ವೈರಲ್ ಆಗಿದೆ. ಚಿರತೆ ದೃಶ್ಯ ವೈರಲ್ ಆಗಿದ್ದೇ ತಡ ಬೈಪಾಸ್ ರಸ್ತೆ ಸಮೀಪ ಜನರು ಜಮಾಯಿಸಿದ್ದಾರೆ. ಇದರಿಂದಾಗಿ ಅಲ್ಲಿಂದ ಚಿರತೆ ಕಾಲ್ಕಿತ್ತಿದ್ದು, ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾ–ರಿಗಳು, ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಅರಣ್ಯ ಇಲಾಖೆ ಅಧಿಕಾ–ರಿಗಳಿಂದ ಚಿರತೆಗಾಗಿ ಶೋಧ ಕಾರ್ಯಾಚರಣೆ ನಡೆಯುತ್ತಿದ್ದು, ಬಿಂಕದಕಟ್ಟಿ, ಅಸುಂಡಿ ಸೇರಿದಂತೆ ಸುತ್ತಲಿನ ಪ್ರದೇಶದ ಜನರು ಮನೆಯಿಂದ ಹೊರಬಾರದಂತೆ ಎಚ್ಚರಿಕೆ ನೀಡಲಾಗಿದೆ.

# ಮತದಾರರು ಪ್ರಜಾಪ್ರಭುತ್ವ ದೇಶದ ಜೀವನಾಡಿ: ತಾಲೂಕು ಐಇಸಿ ಸಂಯೋಜಕ ಕಲ್ಲಪ್ಪ ನಂದರಗಿ ಅಭಿಮತ



ತಿಕೋಟಾ: ತಾಲೂಕಿನ ಸಿದ್ಧಾಪುರ (ಕೆ) ಗ್ರಾಮ ಪಂಚಾಯತಿ ವ್ಯಾಪ್ತಿಯ ಧನ್ನರ್ಗಿ ಗ್ರಾಮದಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಪ್ರಗತಿಯಲ್ಲಿರುವ ಅಮೃತ ಸರೋವರ ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ಗುರುಬಸಪ್ಪ ಮಸಳಿ ಮಾತನಾಡಿ “ಮತದಾನ ಎನ್ನುವುದು ನಮಗೆ ಸಿಕ್ಕ ಅತೀ ಅಮೂಲ್ಯವಾದ ಕರ್ತವ್ಯ. ನಮ್ಮ ಭಾರತದಂತಹ ಪ್ರಜಾಪ್ರಭುತ್ವ ದೇಶಗಳಲ್ಲಿ ಚುನಾವಣೆ ಎನ್ನುವುದು ಹಬ್ಬವಿದ್ದಂತೆ. ಈ ಹಬ್ಬದಲ್ಲಿ ಎಲ್ಲ ಮತದಾರರು ಅತ್ಯಂತ ಸಂತೋಷದಿಂದ, ಖುಷಿ ಖುಷಿಯಾಗಿ ಭಾಗವಹಿಸಬೇಕು. ಮತದಾನ ಕೇವಲ ನಮ್ಮ ಹಕ್ಕು ಮಾತ್ರ ಅಲ್ಲಾ ಅದು ನಮ್ಮ ಶಕ್ತಿ. ರಾಜ್ಯದ ಅಭಿವೃದ್ಧಿಯ ದೃಷ್ಠಿಯಿಂದ ಅರ್ಹ ವ್ಯಕ್ತಿಗೆ ಮತ ಚಲಾವಣೆ ಮಾಡುವುದು ನಮ್ಮೆಲ್ಲರ ಕರ್ತವ್ಯ ಆದಕಾರಣ ಯಾರೂ ಮತಗಳನ್ನು ಹಣ, ಹೆಂಡಕ್ಕೆ ಮಾರಿಕೊಳ್ಳಬಾರದು ಎಂದರು. ಯಾವದೇ ಸಂಕೋಚ, ಭಯ, ಆಮಿಷಕ್ಕೊಳಗಾಗದೇ ನಿಮ್ಮ ಮತವನ್ನು ನಿರ್ಭಿತಿಯಿಂದ ಚಲಾಯಿಸಿ, ನಿಮ್ಮ ಮತಕ್ಕೆ ನೀವೆ ಯಜಮಾನರು ಮತ್ತು ಹೊಣೆಗಾರರು.

ತಾಲೂಕು ಮಾಹಿತಿ ಶಿಕ್ಷಣ ಮತ್ತು ಸಂವಹನ ಸಂಯೋಜಕರಾದ ಕಲ್ಲಪ್ಪ ನಂದರಗಿ ಮಾತನಾಡಿ “ನಮ್ಮ ಶಾಸಕಾಂಗಗಳು ಮತ್ತು ಸಂಸತ್ತುಗಳು ಜನರಿಂದ ಮತ್ತು ಜನ–ರಿಗಾಗಿ ಚುನಾಯಿತವಾಗಿವೆ. ಮತದಾರರು ಪ್ರಜಾಪ್ರಭುತ್ವ ದೇಶದ ಜೀವನಾಡಿ ಇದ್ದಂತೆ. ಪ್ರಜಾಪ್ರಭುತ್ವದ ಅಡಿಪಾಯವೇ ಪ್ರಜೆಗಳು ಇಲ್ಲಿ ಪ್ರಜೆಗಳೇ ಪ್ರಭುಗಳು. ಪ್ರಜೆಗಳಿಂದ, ಪ್ರಜೆಗಳಿಗಾಗಿಯೇ, ಪ್ರಜೆಗಳಿಂದ ನಡೆಯುವ ಆಳಿತ ವ್ಯವಸ್ಥೆಯನ್ನು ಪಡೆದ ನಾವೇ ಧನ್ಯರು. ಮತದಾನ ಮಾಡುವ ಹಕ್ಕನ್ನು ಪಡೆದಿರುವುದು ನಮ್ಮ ಅದೃಷ್ಟ ಮತ್ತು ಅದು ನಮಗೆ ಸಿಕ್ಕ ಪವಿತ್ರ ಹಕ್ಕು. ಅದನ್ನು ಯಾವದೇ ಆಮಿಷಕ್ಕೆ ಒಳಗಾಗದೇ ನಿರ್ಭಿತಿಯಿಂತ ಚಲಾವಣೆ ಮಾಡೋಣ. ಜಾತಿ, ಮತ, ಪಂಥ, ಆಮೀಷಗಳಿಗೆ ಒಳಗಾಗದೇ ರಾಜ್ಯದ ಅಭಿವೃದ್ಧಿಯ ದೃಷ್ಠಿಯನ್ನು ಇಟ್ಟುಕೊಂಡು ಮತದಾನ ಮಾಡಿ ಎಂದರು. ಈ ಬಾರಿ ನಮ್ಮಲ್ಲಿ 100% ಮತದಾನ ಮಾಡೋಣ. ಎಲ್ಲರೂ ನೀವು ಮತದಾನ ಮಾಡಿ ಜೊತೆಗೆ ನಿಮ್ಮ ಅಕ್ಕ–ಪಕ್ಕದವರಿಗೆ, ಕುಟುಂಬಸ್ಥರಿಗೆ, ಸ್ನೇಹಿತರಿಗೆ ಮತದಾನ ಮಾಡಲು ತಿಳಿಸಿ ಎಂದರು.

ಗ್ರಾಮ ಕಾಯಕ ಮಿತ್ರ ಸಂಗೀತಾ ಸಪ್ತಾಳಕರ ರವರು ಕೂಲಿಕಾರರಿಗೆ ಪ್ರತಿಜ್ಞಾ ವಿಧಿ ಭೋಧಿಸಿದರು.

ಈ ಸಂದರ್ಭದಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ಗುರುಬಸಪ್ಪ ಮಸಳಿ, ತಾಲೂಕು ಮಾಹಿತಿ ಶಿಕ್ಷಣ ಮತ್ತು ಸಂವಹನ ಸಂಯೋಜಕರಾದ ಕಲ್ಲಪ್ಪ ನಂದರಗಿ, ತಾಂತ್ರಿಕ ಸಹಾಯಕ ಅಭಿಯಂತರ ಚೇತನ ರಾಥ–ೋಡ, ಬಿ.ಎಫ್.ಟಿ ಸಿದ್ರಾಯ ದಾಶ್ಯಾಳ, ಗ್ರಾಮ ಕಾಯಕ ಮಿತ್ರ ಸಂಗೀತಾ ಸಪ್ತಾಳಕರ ಗ್ರಾಮ ಪಂಚಾಯತಿಯ ಸುರೇಶ ಸಪ್ತಾಳಕರ, ಸೇ–ರಿದಂತೆ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಸೇರಿದಂತೆ ಇತರರು ಹಾಜರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089